# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ನ್ಯಾಯಯುತವಾಗಿ ಧರ್ಮಮಾರ್ಗದಲ್ಲಿ ನಡೆಯುವ
ವ್ಯಕ್ತಿಯ ಸುಖ ಮನಸ್ಸು ಶಾಂತವಾಗಿರುತ್ತದೆ.
ಆ ವ್ಯಕ್ತಿ ನೆಮ್ಮದಿಯ ಬದುಕನ್ನು ಕಾಣುತ್ತಾನೆ..
ಅಧರ್ಮದ ದಾರಿಯಲ್ಲಿ ನಡೆದೂ, ಸನ್ಮಾನಕ್ಕೆ
ಒಳಗಾಗುವವನ ಮನಸ್ಸು ಗೊಂದಲಕ್ಕೊಳಗಾಗುತ್ತದೆ
ಅವನು ಸುಖಮಯ ಜೀವನ ನಡೆಸಲು ಸಾಧ್ಯವಿಲ್ಲ..
ಅನೇಕ ಪಾಪಕರ್ಮಗಳನ್ನು ಹೊತ್ತುಕೊಂಡು
ವೃತ್ತಿಯಲ್ಲಿ ಜನಿಸಿದರೂ, ಅವನ ನಡತೆಯಿಂದ
ಮತ್ತು ಆತ ಮಾಡುವ ಉತ್ತಮ ಕಾರ್ಯಗಳಿಂದ
ಆತನ ಪಾಪ ಪುಣ್ಯಗಳನ್ನು ಅಳೆಯಲಾಗುತ್ತದೆ..

**ಭಗವಾನ್ ಶ್ರೀಕೃಷ್ಣ**



PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 06-02-2026 to 12-02-2026 ಬೆಲೆ:10-00 ಸಂಪುಟ-1 ಸಂಚಿಕೆ-19 ಪುಟಗಳು-6






ಇಂದಿನ ಆಧುನಿಕ ಸಮಾಜದಲ್ಲಿ ಚಿಕ್ಕ ಮಕ್ಕಳಿಂದ ಹಿಡಿದು ವೃದ್ಧರವರಗೆ ಸ್ಮಾರ್ಟ್ ಫೋನ್‌ಗಳು ಜೀವನದ ಅವಿಭಾಜ್ಯ ಅಂಗವಾಗಿದೆ. ಅದರಲ್ಲಿಯೂ ಇಂದು ಪೋಷಕರು ಮಕ್ಕಳನ್ನು ಶಾಂತಗೊಳಿಸಲು ಅವರ ಕೈಗೆ ಮೊಬೈಲ್ ಕೊಟ್ಟು ತಮ್ಮ ಕೆಲಸದಲ್ಲಿ ತೊಡಗಿರುವುದನ್ನು ನೋಡಬಹುದು. ಆದರೆ ಆ ಮಕ್ಕಳು ಮೊಬೈಲ್‌ನಲ್ಲಿ ಯಾವ ಆಪ್ ಬಳಸುತ್ತಿದ್ದಾರೆ ಎನ್ನುವುದರ ಬಗ್ಗೆ ತಿಳಿದಿರುವುದಿಲ್ಲ. ಅದರಲ್ಲಿಯೂ ಮಕ್ಕಳು ಅಪಾಯಕಾರಿ ಆನ್‌ಲೈನ್ ಗೇಮಿನ ಚಟಕ್ಕೆ ಬೀಳುವ ಸಂಭವ ಹೆಚ್ಚಾಗಿರುತ್ತದೆ. ಆದ್ದರಿಂದ ಮಕ್ಕಳ ಕೈಗೆ ಮೊಬೈಲ್ ಕೊಡುವ ಮೊದಲು ಪೋಷಕರು ಎಚ್ಚರ ವಹಿಸುವುದು ಉತ್ತಮ.

## ಕರ್ನಾಟಕವನ್ನು ರಕ್ಷಿಸಿ –ಹೆಚ್.ಡಿ. ದೇವೇಗೌಡ



**ಹೊಸದಿಲ್ಲಿ:** ಕರ್ನಾಟಕದಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದೆ. ದಯಮಾಡಿ ಅದನ್ನು ಪರಿಹರಿಸಿ ಎಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಕೇಂದ್ರ ಸರಕಾರವನ್ನು ಮನವಿ ಮಾಡಿಕೊಂಡರು. ರಾಜ್ಯಸಭೆಯಲ್ಲಿ ಬುಧವಾರ ನಡೆದ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು ರಾಜ್ಯ ಎದುರಿಸುತ್ತಿರುವ ನೀರಾವರಿ ಬಿಕ್ಕಟ್ಟಿನ ಬಗ್ಗೆ ರಾಜ್ಯಸಭೆಯಲ್ಲಿ ಗದ್ಗದಿತರಾದರು. ರಾಜ್ಯದ ಅನೇಕ ನೀರಾವರಿ ಯೋಜನೆಗಳು ನೆನೆಗುದಿಗೆ ಬಿದ್ದಿವೆ. ಆ ಎಲ್ಲಾ ಯೋಜನೆಗಳಿಗೆ ಅನುಮೋದನೆ ನೀಡುವ ಮೂಲಕ ಕರ್ನಾಟಕ 3ನೇ ಪುಟಕ್ಕೆ...

## ಪಶ್ಚಿಮ ಬಂಗಾಳದಲ್ಲೇ ಯಾಕೆ, ಅಸ್ಸಾಂನಲ್ಲಿ ಏಕಿಲ್ಲ –ಮಮತಾ

**ನವದೆಹಲಿ:** ಎಸ್‌ಐಆರ್ ವಿಚಾರವಾಗಿ ಪಶ್ಚಿಮ ಬಂಗಾಳಕ್ಕೆ ಅನ್ವಯಿಸಿರುವ ಮಾನದಂಡಗಳನ್ನು ಅಸ್ಸಾಂನಲ್ಲಿ ಏಕೆ ಅನ್ವಯಿಸಲಿಲ್ಲ? ಬಂಗಾಳದ ಜನರನ್ನು ಗುರಿಯಾಗಿಸಿಕೊಂಡು ಈ ದೌರ್ಜನ್ಯ ಎಸಗುತ್ತಿದ್ದಾರೆ ಎಂದು ಮಮತಾ ಬ್ಯಾನರ್ಜಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯಲ್ಲಿ ಮತದಾರರನ್ನು ಸಾಮೂಹಿಕವಾಗಿ ತೆಗೆದು ಹಾಕುತ್ತಿದ್ದಾರೆ. ಈ ಮೂಲಕ ಪಶ್ಚಿಮ ಬಂಗಾಳವನ್ನು ಟಾರ್ಗೆಟ್ ಮಾಡಲಾಗುತ್ತಿದೆ. ಹಾಗಾಗಿ, ಸುಪ್ರೀಂ ಕೋರ್ಟ್ 3ನೇ ಪುಟಕ್ಕೆ...



## ಬಡವರ ಉದ್ಯೋಗ ಕಸಿದುಕೊಳ್ಳಬೇಡಿ: ಪ್ರಿಯಾಂಕ್ ಖರ್ಗೆ

**ಬೆಂಗಳೂರು:** ಹೊಸ ಕಾಯ್ದೆಗೆ 'ನಾಥೂರಾಮ್ ಗೋಡ್ಸೆ ವಿಕಸಿತ ಭಾರತ' ಎಂಬ ಹೆಸರನ್ನಾದರೂ ಇಡಿ. ಆದರೆ, ಬಡವರ ಉದ್ಯೋಗ ಕಸಿದುಕೊಳ್ಳುವ ಕೆಲಸ ಮಾಡಬೇಡಿ' ಎಂದು ಕೇಂದ್ರ ಸರ್ಕಾರಕ್ಕೆ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಮನವಿ ಮಾಡಿದ್ದಾರೆ. ವಿಬಿ ಜಿ ರಾಮ್ ಜಿ ಕಾಯ್ದೆ ರದ್ದುಪಡಿಸಿ, ನರೇಗಾ ಕಾಯ್ದೆಯನ್ನು ಮರು ಸ್ಥಾಪಿಸಬೇಕೆಂದು ಸರ್ಕಾರ ಮಂಡಿಸಿದ ನಿರ್ಣಯ ಬೆಂಬಲಿಸಿ ಮಾತನಾಡಿದ ಪ್ರಿಯಾಂಕ್, ನಮ್ಮ ಹೋರಾಟ ಕೇವಲ ಹೆಸರು ಬದಲಾವಣೆಗೆ ಸೀಮಿತವಲ್ಲ. ಯೋಜನೆಯ 3ನೇ ಪುಟಕ್ಕೆ...



ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು




ಎಸ್‌ಸಿಡಿಸಿಸಿ ಬ್ಯಾಂಕ್



ಡಾ। ಎಂ.ಎನ್. ರಾಜೇಂದ್ರ ಕುಮಾರ್
ಅಧ್ಯಕ್ಷರು

ಪೂರ್ಣ ಭರವಸೆಯ ₹18,000 ಕೋಟಿ ವ್ಯವಹಾರ

111 ವರ್ಷಗಳ ಸಾರ್ಥಕ ಸೇವೆಯಲ್ಲಿ...

ಠೇವಣಿಗಳಿಗೆ ಆಕರ್ಷಕ ಬಡ್ಡಿದರ (ಮುಂದಿನ 1 ತಿಂಗಳ ಅವಧಿಗೆ) 9.50%*

ಠೇವಣಿಗಳು RBIನ DICGC ವಿಮಾ ಭದ್ರತೆ ಹೊಂದಿರುತ್ತದೆ.

ಕಡಿಮೆ ಬಡ್ಡಿದರದಲ್ಲಿ ವೆಹಿಕಲ್ ಲೋನ್

ಕಡಿಮೆ ಬಡ್ಡಿದರದಲ್ಲಿ ಗೃಹ ಸಾಲ

ಚಿನ್ನಾಭರಣ ಈಡಿನ ಸಾಲ
ಕನಿಷ್ಠ ಬಡ್ಡಿದರದಲ್ಲಿ ತ್ವರಿತ ಸೇವೆಯೊಂದಿಗೆ ಅಧಿಕ ಸಾಲ
ಗ್ರಾಂ ಗೆ ರೂ.9400/-

ಸಾಲ ಸೌಲಭ್ಯಗಳು: » ಕೃಷಿ ಹೈನುಗಾರಿಕೆ » ವ್ಯಾಪಾರ ಉದ್ದೇಶಗಳಿಗೆ » ಸ್ವಸಹಾಯ ಗುಂಪುಗಳಿಗೆ » ವೇತನಾಧಾರಿತ » ಶಿಕ್ಷಣ ಸಾಲ » ಕೈಗಾರಿಕೆ ಮತ್ತು ಸೇವಾ ಘಟಕ

ಶ್ರೀ ವಿನಯ ಕುಮಾರ್ ಸೂರಿಂಜೆ
ಉಪಾಧ್ಯಕ್ಷರು

ಶ್ರೀ ಕೆ. ಗೋಪಾಲಕೃಷ್ಣ ಭಟ್
ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಪ್ರಭಾರ)

ಹಾಗೂ ಆಡಳಿತ ಮಂಡಳಿ ನಿರ್ದೇಶಕರು

ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿ.
SCDCC BANK LTD.
H.O. MANGALORE

ಪ್ರಧಾನ ಕಛೇರಿ: 'ಉತ್ಕೃಷ್ಟ ಸಹಕಾರಿ ಸೌಧ', ಕೊಡಿಯಾಲ್‌ಬೈಲ್, ಮಂಗಳೂರು-3, ದೂರವಾಣಿ: 0824-2440381, 2440882, 2441341, 2441243

# ಸುದ್ದಿ ತುಣುಕು

ವಿಬಿಜಿ ರಾಮ್‌ಜಿ ವಿಧೇಯಕವನ್ನು ಖಂಡಿಸುವ ನಿರ್ಣಯದ ಬಗ್ಗೆ ಸದನದಲ್ಲಿ ಪ್ರತಿಪಕ್ಷಗಳ ಶಾಸಕರ ಧರಣಿ, ಗಲಾಟೆ, ಗದ್ದಲ ನಡುವೆಯೇ ದಿನವಿಡೀ ಚರ್ಚೆ ನಡೆಯಿತು.

ಬಿಜೆಪಿ ಮುಖಂಡನ ಕೊಲೆ ಯತ್ನ ಹಾಗೂ ಎಸ್‌ಡಿಪಿಐ ಕಾರ್ಯಕರ್ತನ ಹತ್ಯೆ ಪ್ರಕರಣ ಸಂಬಂಧ 6 ಮಂದಿ ಆರೋಪಿಗಳಿಗೆ 10 ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ವಿಧಿಸಲಾಗಿದೆ.

ಪಾಕಿಸ್ತಾನ ನಾಲಿಗೆ ವಿಚಾರವಾಗಿ ವಿಷಾದ ವ್ಯಕ್ತಪಡಿಸದ ಬಿಜೆಪಿ ಸದಸ್ಯ ಸಿ.ಟಿ.ರವಿ ಅವರನ್ನು ದಿನದ ಮಟ್ಟಿಗೆ ಸಭಾಪತಿ ಬಸವರಾಜ ಹೊರಟ್ಟಿ ಅಮಾನತು ಮಾಡಿದ್ದಾರೆ.

ನಮ್ಮ ಮೆಟ್ರೋ ರೈಲು ಟಿಕೆಟ್ ದರ ಹೆಚ್ಚಿಸಲು ರಾಜ್ಯ ಸರ್ಕಾರ ಸಮ್ಮತಿ ನೀಡಿದ್ದು, ಪ್ರಯಾಣಿಕರಿಗೆ ಮತ್ತಷ್ಟು ಹೊರೆಯಾಗಲಿದೆ. ಟಿಕೆಟ್ ದರ ಹೆಚ್ಚಳದ ಬಗ್ಗೆ ಬಿಎಂಆರ್‌ಸಿಎಲ್ ಇನ್ನಷ್ಟೇ ಅಧಿಕೃತ ಆದೇಶ ಹೊರಡಿಸಬೇಕಿದೆ.

ಹತ್ಯೆ ಪ್ರಕರಣದ ಆರೋಪದಡಿ ಜ್ಯೋತಿಷಿ ಕಮಲಾಕರ ಭಟ್ ಬಂಧನ ಪ್ರಕರಣದ ಹಿನ್ನೆಲೆಯಲ್ಲಿ ಪರಿಷತ್ ಸದಸ್ಯ ಹರಿಪ್ರಸಾದ್ ಹಾಗೂ ಶಾಸಕ ಸುರೇಶ್ ಕುಮಾರ್ ಪರಸ್ಪರ ಆರೋಪ-ಪ್ರತ್ಯಾರೋಪ ಮಾಡಿದ್ದಾರೆ.

ಜಂಟಿ ಅಧಿವೇಶನ ಹಲವು ಜಟಾಪಟಿಗಳಿಗೆ ಸಾಕ್ಷಿ ಆಯಿತು. ಕೊನೆ ದಿನವಾಗಿರುವ ಇಂದು ವಿಬಿ ಜಿ-ರಾಮ್ ಜಿ ಕುರಿತ ಚರ್ಚೆಯ ನಿರೀಕ್ಷೆಯಲ್ಲಿದ್ದ ಮೇಲ್ಮನೆ ಸದಸ್ಯರಿಗೆ ನಿರಾಸೆ ಕೂಡ ಆಯಿತು.

ಕೇಂದ್ರ ಸರ್ಕಾರ ಕಡಲೆ ಬೆಂಬಲ ಬೆಲೆ ಕ್ವಿಂಟಾಲ್‌ಗೆ 5785 ರೂ. ಘೋಷಣೆ ಮಾಡಿದಂತೆ ಕೂಡಲೇ ಖರೀದಿ ಕೇಂದ್ರ ಆರಂಭಿಸಬೇಕು ಎಂದು ಬೆಳೆಗಾರರು ಒತ್ತಾಯಿಸಿದ್ದಾರೆ.

ಬೆಳಗಾವಿ ಜಿಲ್ಲಾ ಮತ್ತು ಸತ್ರ ಕೋರ್ಟ್ ಮಹತ್ವದ ತೀರ್ಪು ಪ್ರಕಟಿಸಿದೆ. ಮಹಿಳೆಯನ್ನು ವಿವಸ್ತ್ರಗೊಳಿಸಿ ಹಲ್ಲೆ ಮಾಡಿದ ಕೇಸ್‌ನಲ್ಲಿ 12 ಆರೋಪಿಗಳು ತಪ್ಪಿತಸ್ಥರೆಂದು ತೀರ್ಪು ಪ್ರಕಟಿಸಿದೆ.

ಬಜೆಟ್ ಅಧಿವೇಶನದ ಭಾಗವಾಗಿ ಸಂಸತ್ತಿನ ಎರಡೂ ಸದನಗಳಲ್ಲಿ ರಾಷ್ಟ್ರಪತಿಗಳ ಭಾಷಣಕ್ಕೆ ಧನ್ಯವಾದ ಸಲ್ಲಿಸುವ ನಿರ್ಣಯದ ಕುರಿತು ಚರ್ಚೆ ಮುಂದುವರಿಯಲಿದೆ.

ಈಶಾನ್ಯ ರಾಜ್ಯ ಮಣಿಪುರದಲ್ಲಿ ರಾಷ್ಟ್ರಪತಿ ಆಡಳಿತ ಅಧಿಕೃತವಾಗಿ ಕೊನೆಗೊಂಡಿದೆ. ಇಂದು ಬಿಜೆಪಿ ನೇತೃತ್ವದ ನೂತನ ಸರ್ಕಾರ ಅಧಿಕಾರಕ್ಕೆ ಬಂದಿದ್ದು, ವೈ. ಖೇಮ್‌ಚಂದ್ ಸಿಂಗ್ ಅವರು ಸಿಎಂ ಆಗಿ ಪ್ರಮಾಣವಚನ ಸ್ವೀಕರಿಸಿದರು.

ಧರ್ಮರಾಯ ಸ್ವಾಮಿ ದೇವಾಲಯದಲ್ಲಿ ನಡೆದಿದೆ ಎನ್ನಲಾದ ಚಿನ್ನದ ಸರ ಕಳವು ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಿ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.

ಮಂಗಳೂರಿನ ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಆಲ್ ಇಂಡಿಯಾ ಕೌನ್ಸಿಲ್ ಫಾರ್ ಟೆಕ್ನಿಕಲ್ ಎಜುಕೇಶನ್ ವತಿಯಿಂದ ಸ್ವಾಯತ್ತ ಸ್ಥಾನಮಾನ ಪಡೆದ ದೇಶದ ಮೊದಲ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಹಿಂದಿನ ಪರೀಕ್ಷೆಯ ಫಲಿತಾಂಶಗಳ ಆಧಾರದ ಮೇಲೆ IAS ಅಥವಾ IFSಗೆ ನೇಮಕಗೊಂಡ ಅಭ್ಯರ್ಥಿಗಳು 2026ರ ನಾಗರಿಕ ಸೇವಾ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ.

ಛತ್ತೀಸ್‌ಗಢದ ನಬ್ರಂಗ್‌ಪುರ ಜಿಲ್ಲೆಯಲ್ಲಿ ಒಂಬತ್ತು ನಕ್ಸಲರು ಶರಣಾಗುವ ಮೂಲಕ ಈ ಪ್ರದೇಶ ಮಾವೋವಾದಿಗಳಿಂದ ಮುಕ್ತಗೊಂಡಿದೆ ಎಂಬ ಘೋಷಣೆ ಬೆನ್ನಲ್ಲೇ ಇದೀಗ ಮಲ್ಕನ್‌ಗಿರಿ ಕೂಡ ನಕ್ಸಲ್ ಮುಕ್ತವಾಗಿದೆ.

# ತಂಬಿಟ್ಟು



**ಬೇಕಾಗುವ ಸಾಮಗ್ರಿಗಳು :**

ಅಕ್ಕಿಹಿಟ್ಟು – 1/2 ಕಪ್
ಹುರಿಗಡಲೆ ಹಿಟ್ಟು – 1/4 ಕಪ್
ಬೆಲ್ಲದ ಪುಡಿ – 3/4 ಕಪ್
ತುಪ್ಪ – 5 ಚಮಚ
ಕಾಯಿತುರಿ – 1/4 ಕಪ್
ಏಲಕ್ಕಿಪುಡಿ – 1/2 ಚಮಚ

**ಮಾಡುವ ವಿಧಾನ :**

ಮೊದಲಿಗೆ ಪಾತ್ರೆಗೆ ಬೆಲ್ಲದ ಪುಡಿ ಹಾಕಿ ಸ್ವಲ್ಪವೇ ನೀರು ಹಾಕಿ ಕರಗಿಸಿಕೊಂಡು ನಂತರ ಬೆಲ್ಲದ ನೀರನ್ನು ಶೋಧಿಸಿಕೊಳ್ಳಬೇಕು. ನಂತರ ಶೋಧಿಸಿದ ಬೆಲ್ಲದ ನೀರನ್ನು ಬಾಣಲೆಯಲ್ಲಿ ಹಾಕಿ ಒಲೆಯ ಮೇಲಿಟ್ಟು ಅದಕ್ಕೆ ತುಪ್ಪ ಮತ್ತು ಕಾಯಿ ತುರಿ ಸೇರಿಸಿ ಒಂದೆಳೆ ಪಾಕ ಬರುವವರೆಗೂ ಮಂದಉರಿಯಲ್ಲಿ ಕಾಯಿಸ ಬೇಕು. ನಂತರ ಅಕ್ಕಿಹಿಟ್ಟು ಮತ್ತು ಹುರಿ ಗಡಲೆ ಹಿಟ್ಟನ್ನು ಮಿಶ್ರ ಮಾಡಿಕೊಂಡು ಬಾಣಲೆಗೆ ಹಾಕಿ, ಗಂಟಾಗದಂತೆ ಮಿಶ್ರ ಮಾಡುತ್ತಾ ಇರಬೇಕು. ಒಮ್ಮೆ ಚೆನ್ನಾಗಿ ಮಿಶ್ರಣ ಮಾಡಿಕೊಂಡ ನಂತರ ಉರಿಯನ್ನು ಸಣ್ಣಗೆ ಮಾಡಿಕೊಂಡು, ಒಂದೆರೆಡು ನಿಮಿಷಗಳ ನಂತರ ಉರಿಯನ್ನು ಆರಿಸಬೇಕು. ನಂತರ ಬಾಣಲೆಯನ್ನು ತಟ್ಟೆಯಿಂದ ಮುಚ್ಚಬೇಕು. ಐದು ನಿಮಿಷಗಳ ನಂತರ ಮತ್ತೆ ಮಿಶ್ರಣವನ್ನು ತಿರುವಿ, ಉಂಡೆ ಕಟ್ಟಿದರೆ, ತುಪ್ಪದ ಆರತಿಗೂ ಬಳಸುವಂತಹ ರುಚಿಯಾದ ತಂಬಿಟ್ಟು ಸವಿಯಲು ಸಿದ್ದ.

# ಪಾಕಿಸ್ತಾನದ ರಾಜಕೀಯಲ್ಲಿ ಭಾರೀ ಅಲ್ಲೋಲ ಕಲ್ಲೋಲ



ನವದೆಹಲಿ : ಭಾರತ ಮತ್ತು ಅಮೆರಿಕ ಮಧ್ಯೆ ವ್ಯಾಪಾರ ಒಪ್ಪಂದದ ಸುಳಿವು ಸಿಕ್ಕಿದೆ. ನಿನ್ನೆ ಡೊನಾಲ್ಡ್ ಟ್ರಂಪ್ ಮತ್ತು ನರೇಂದ್ರ ಮೋದಿ ಫೋನಿನಲ್ಲಿ ಸಂಭಾಷಣೆ ನಡೆಸಿದ್ದಾರೆ. ಇದರಿಂದಾಗಿ ಇಬ್ಬರ ನಡುವಿನ ಸಂಬಂಧ ಬಲವಾಗಿದ್ದು, ಭಾರತದ ಮೇಲಿನ ಸುಂಕವನ್ನು ಕೂಡ ಕಡಿತಗೊಳಿಸಿದೆ. ಇದರಿಂದ ಪಾಕಿಸ್ತಾನದಲ್ಲಿ ರಾಜಕೀಯ ಮತ್ತು ಸಾಮಾಜಿಕ ವಲಯಗಳಲ್ಲಿ ಭಾರೀ ಅಲ್ಲೋಲ ಕಲ್ಲೋಲ ಉಂಟಾಗಿದೆ ಎಂದು ವರದಿಯಾಗಿದೆ.

# ಬಲೂಚಿಸ್ತಾನದಲ್ಲಿ ಯುದ್ಧದಂತಹ ವಾತಾವರಣ

ಕರಾಚಿ: ಪಾಕಿಸ್ತಾನದ ಅತ್ಯಂತ ಅಸ್ಥಿರ ಪ್ರಾಂತ್ಯವಾದ ಬಲೂಚಿಸ್ತಾನದಲ್ಲಿ ಕಳೆದ ಎರಡು ದಿನಗಳಿಂದ ಯುದ್ಧದಂತಹ ವಾತಾವರಣ ನಿರ್ಮಾಣವಾಗಿದೆ. ಶನಿವಾರ ಉಗ್ರರು ನಡೆಸಿದ ಸರಣಿ ದಾಳಿಗೆ ಪ್ರತಿಯಾಗಿ ಪಾಕಿಸ್ತಾನಿ ಭದ್ರತಾ ಪಡೆಗಳು ನಡೆಸಿದ ಬೃಹತ್ ಕಾರ್ಯಾಚರಣೆಯಲ್ಲಿ ಇದುವರೆಗೆ 177 ಉಗ್ರರನ್ನು ಹತ್ಯೆ ಮಾಡಲಾಗಿದೆ. ರೈಲ್ವೆ ಹಳಿಗಳು, ಪೊಲೀಸ್ ಠಾಣೆಗಳು ಮತ್ತು ಸೇನಾ ನೆಲೆಗಳನ್ನು ಗುರಿಯಾಗಿಸಿಕೊಂಡು ನಡೆದ ಈ ದಾಳಿಯಲ್ಲಿ



ಹತ್ತಾರು ಮಂದಿ ಸಾವನ್ನಪ್ಪಿದ್ದರು.

# ಚೀನಾದ ಕ್ಷಿಪಣಿಗಳಿಗೆ ಇಂಧನದ ಬದಲು ನೀರು !



ಬೀಜಿಂಗ್ : ಪರಮಾಣು ಅಸ್ತ್ರದ ಮಾಹಿತಿಯನ್ನು ಅಮೆರಿಕಕ್ಕೆ ಸೋರಿಕೆ, ಭ್ರಷ್ಟಾಚಾರದ ಆರೋಪದಡಿ ಇತ್ತೀಚೆಗೆ ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್ ಆಪ್ತ, ಹಿರಿಯ ಸೇನಾಧಿಕಾರಿ ಜಾಂಗ್ ಯೂಕ್ಸಿಯಾರರನ್ನು ಬಂಧಿಸಲಾಗಿತ್ತು. ಅದು ಚೀನಾ ಸೇನೆಯೊಳಗೆ ಹಬ್ಬಿರುವ ಭ್ರಷ್ಟಾಚಾರದ ಬಗ್ಗೆ ಬೆಳಕು ಚೆಲ್ಲಿತ್ತು. ಅದರ ಬೆನ್ನಲ್ಲೇ 'ಒಂದೇ ಒಂದು ಬಟನ್ ಒತ್ತಿದರೆ ಸಾವಿರಾರು ಕಿ.ಮೀ. ದೂರ ಹಾರಲು ಸಜ್ಜಾಗಿ ನಿಂತಿದ್ದ ಚೀನಾದ ಪರಮಾಣು ಕ್ಷಿಪಣಿಗಳು ಹಾರದೇ ಇರುವ ಸಾಧ್ಯತೆಯೇ ಹೆಚ್ಚು.

# ಭಾರತದ ಆರ್ಥಿಕ ಉನ್ನತಿ ಪುಷ್ಟೀಕರಿಸಿ ಬರೆದ ಎಲಾನ್ ಮಸ್ಕ್

ನವದೆಹಲಿ : ದೇಶದ ಆರ್ಥಿಕ ಪರಿಸ್ಥಿತಿ ಹಾಗೂ ಸರ್ಕಾರದ ಆರ್ಥಿಕ ನೀತಿಗಳ ಬಗ್ಗೆ ಕಳವಳ ಮತ್ತು ಟೀಕೆ ಮಾಡುತ್ತಲೇ ಬಂದಿರುವ ರಾಹುಲ್ ಗಾಂಧಿ ಹಾಗೂ ವಿಪಕ್ಷಗಳ ವಿರುದ್ಧ ಸರ್ಕಾರ ಹರಿಹಾಯಲು ಹೊಸ ಅಸ್ತ್ರ ಸಿಕ್ಕಿದೆ. ವಿಶ್ವದ ನಂಬರ್ ಒನ್ ಶ್ರೀಮಂತ ಇಲಾನ್ ಮಸ್ಕ್ ಅವರು ಭಾರತದ ಆರ್ಥಿಕ ಉನ್ನತಿಯನ್ನು ಪುಷ್ಟೀಕರಿಸಿ ಮಾಡಿರುವ ಟ್ವೀಟ್ ವೊಂದು ಈಗ ಸರ್ಕಾರಕ್ಕೆ ಹೊಸ ಶಸ್ತ್ರವಾಗಿ ಪರಿಣಮಿಸಿದೆ.




# ಇಡೀ ಮಧ್ಯಪ್ರಾಚ್ಯ ಭಸ್ಮವಾಗುತ್ತದೆ: ಖಮೇನಿ



ಟೆಹ್ರಾನ್: ಅಮೆರಿಕ ಮತ್ತು ಇರಾನ್ ನಡುವಿನ ವಾಗ್ಯುದ್ಧ ಈಗ ಯುದ್ಧದ ಅಂಚಿಗೆ ಬಂದು ನಿಂತಿದೆ. ಇರಾನ್ ಮೇಲೆ ಅಮೆರಿಕ ಏನಾದರೂ ಮಿಲಿಟರಿ ದಾಳಿ ನಡೆಸಿದರೆ, ಅದು ಕೇವಲ ಇರಾನ್‌ಗೆ ಸೀಮಿತವಾಗದೆ ಇಡೀ ಮಧ್ಯಪ್ರಾಚ್ಯವನ್ನು ಆವರಿಸುವ ಮಹಾ ಯುದ್ಧವಾಗಿ ಪರಿಣಮಿಸಲಿದೆ ಎಂದು ಇರಾನ್ ಪರಮೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ತೀವ್ರ ಎಚ್ಚರಿಕೆ ನೀಡಿದ್ದಾರೆ.

# ಚೊಚ್ಚಲ ಆಸ್ಟ್ರೇಲಿಯನ್ ಓಪನ್ ಗೆದ್ದ ಅಲ್ಕರಾಜ್

ಆಸ್ಟ್ರೇಲಿಯಾ : 24 ಬಾರಿ ಗ್ರ್ಯಾಂಡ್ ಸ್ಲ್ಯಾಮ್ ವಿಜೇತ ನೊವಾಕ್ ಜೊಕೊವಿಕ್ ವಿರುದ್ಧ 22 ವರ್ಷದ ಸ್ಪ್ಯಾನಿಷ್ ಹೀರೋ ಕಾರ್ಲೋಸ್ ಅಲ್ಕರಾಜ್ ಮೊದಲ ಸೆಟ್ ಸೋತರೂ ಮುಂದಿನ ಮೂರು ಸೆಟ್‌ಗಳಲ್ಲಿ 2–6, 6–2, 6–3, 7–5 ರಿಂದ ಸೋಲಿಸುವ ಮೂಲಕ ತಮ್ಮ ಮೊದಲ ಆಸ್ಟ್ರೇಲಿಯನ್ ಓಪನ್ ಪ್ರಶಸ್ತಿಯನ್ನು ಗೆದ್ದರು. ಆಸ್ಟ್ರೇಲಿಯನ್ ಓಪನ್ ಹಾರ್ಡ್‌ಕೋರ್ಟ್‌ಗಳಲ್ಲಿ ಇದು ಕಾರ್ಲೋಸ್ ಅಲ್ಕರಾಜ್ ಅವರ ಮೊದಲ ಪ್ರಶಸ್ತಿಯಾಗಿದೆ. ವೃತ್ತಿಜೀವನದ ಗ್ರ್ಯಾಂಡ್ ಸ್ಲ್ಯಾಮ್ ಗೆದ್ದ ಅತ್ಯಂತ



ಕಿರಿಯ ಪುರುಷ ಆಟಗಾರ ಎಂಬ ದಾಖಲೆಯನ್ನು ಅಲ್ಕರಾಜ್ ಹೊಂದಿದ್ದಾರೆ.

# ಆಂಗ್ಲರ ಪರ ಅತೀ ಹೆಚ್ಚು ಪಂದ್ಯಗಳನ್ನಾಡಿದ ಬಟ್ಲರ್



ಶ್ರೀಲಂಕಾ : ಇಂಗ್ಲೆಂಡ್ ತಂಡದ ಸ್ಟಾರ್ ಬ್ಯಾಟರ್ ಜೋಸ್ ಬಟ್ಲರ್ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಹೊಸ ಇತಿಹಾಸ ಬರೆದಿದ್ದಾರೆ. ಅದು ಸಹ ಇಂಗ್ಲೆಂಡ್ ಪರ ಅತ್ಯಧಿಕ ಪಂದ್ಯಗಳನ್ನಾಡುವ ಮೂಲಕ. ಈ ಮೂಲಕ ಆಂಗ್ಲರ ಪರ ಬಟ್ಲರ್ ಹೊಸ ದಾಖಲೆ ನಿರ್ಮಿಸಿದ್ದಾರೆ. 2002ರಲ್ಲಿ ಅಂತಾರಾಷ್ಟ್ರೀಯ ಕೆರಿಯರ್ ಆರಂಭಿಸಿದ್ದ ಜೇಮ್ಸ್ ಆಂಡರ್ಸನ್ ಇಂಗ್ಲೆಂಡ್ ಪರ ಬರೋಬ್ಬರಿ 401 ಪಂದ್ಯಗಳನ್ನಾಡಿದ್ದರು. 2011ರಿಂದ ಇಂಟರ್‌ನ್ಯಾಷನಲ್ ಮ್ಯಾಚ್ ಆಡುತ್ತಿರುವ ಬಟ್ಲರ್ 40 ಪಂದ್ಯಗಳನ್ನಾಡಿದ್ದಾರೆ.

# ಬಾಲ್ ಬ್ಯಾಡ್ಮಿಂಟನ್ : ಆಳ್ವಾಸ್ ಬಾಲಕಿಯರು ಚಾಂಪಿಯನ್ಸ್

ಮೂಡುಬಿದಿರೆ : ತಮಿಳುನಾಡಿನ ಈರೋಡಿನಲ್ಲಿ ಮುಕ್ತಾಯಗೊಂಡ 70ನೇ ರಾಷ್ಟ್ರೀಯ ಜೂನಿಯರ್ ಬಾಲ್ ಬ್ಯಾಡ್ಮಿಂಟನ್ ಚಾಂಪಿಯನ್ಶಿಪ್‌ನಲ್ಲಿ ಕರ್ನಾಟಕ ರಾಜ್ಯ ತಂಡವನ್ನು ಪ್ರತಿನಿಧಿಸಿದ ಆಳ್ವಾಸ್ ಕಾಲೇಜಿನ ಬಾಲಕಿಯರನ್ನೊಳಗೊಂಡ ತಂಡ ಚಾಂಪಿಯನ್ಸ್ ಪಟ್ಟ ಅಲಂಕರಿಸಿದರೆ, ಬಾಲಕರ ತಂಡ ರನ್ನರ್ಸ್ ಅಪ್ ಪಶಸ್ತಿಯನ್ನು ಪಡೆದುಕೊಂಡಿತು. ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮೆರೆದ ಕರ್ನಾಟಕ ತಂಡಗಳನ್ನು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ ಎಂ ಮೋಹನ ಆಳ್ವ



ಶ್ಲಾಘಿಸಿದ್ದಾರೆ.

# ಬೃಹತ್ ಡ್ರಗ್ ತಯಾರಿಕಾ ಜಾಲವನ್ನು ಭೇದಿಸಿದ ಎನ್‌ಸಿಬಿ ಅಧಿಕಾರಿಗಳು



ಮೈಸೂರು : ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಎನ್‌ಸಿಬಿ ಅಧಿಕಾರಿಗಳು ಬೃಹತ್ ಡ್ರಗ್ ತಯಾರಿಕಾ ಜಾಲವನ್ನು ಭೇದಿಸಿದ್ದಾರೆ. 10 ಕೋಟಿ ಮೌಲ್ಯದ ಮಾದಕವಸ್ತುಗಳನ್ನು ಜಪ್ತಿ ಮಾಡಿ, ರಾಜಸ್ಥಾನ ಮೂಲದ ನಾಲ್ವರನ್ನು ಬಂಧಿಸಲಾಗಿದೆ. ಸಾಂಸ್ಕೃತಿಕ ನಗರಿ ಮೈಸೂರು ಇದೀಗ ಮಾದಕವಸ್ತುಗಳ ಅಕ್ರಮ ಜಾಲದ ಕೇಂದ್ರವಾಗುತ್ತಿದೆಯೇ ಎಂಬ ಆತಂಕಕಾರಿ ಪ್ರಶ್ನೆ ಉದ್ಭವಿಸಿದೆ. ಮೈಸೂರಿನಲ್ಲಿ ಡ್ರಗ್ ತಯಾರಿಸಿ ಅಂತರರಾಜ್ಯಗಳಿಗೆ ಸರಬರಾಜು ಮಾಡಲು ರೂಪಿಸಲಾಗಿದ್ದ ದೊಡ್ಡ ಮಟ್ಟದ ಯೋಜನೆಯನ್ನು ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ (ಎನ್‌ಸಿಬಿ) ಭೇದಿಸಿದ್ದು, ರಾಜ್ಯಾದ್ಯಂತ ಭಾರೀ ಚರ್ಚೆಗೆ ಕಾರಣವಾಗಿದೆ.

# ಅಂಬಲಿ ರಾಶಿಗೆ ಮುತ್ತಿನ ಗಿಣಿ ಸಮೃದ್ಧಿಯಾಯ್ತಲೇ ಪರಾಕ್ !

ಹೊಸಪೇಟೆ: ವಿಜಯನಗರ ಜಿಲ್ಲೆ ಹೂವಿನಹಡಗಲಿ ತಾಲೂಕಿನ ಹರಪನಹಳ್ಳಿಯ ದೊಡ್ಡ ಮೈಲಾರದ ಮೈಲಾರಲಿಂಗೇಶ್ವರ ದೇವಾಲಯದಲ್ಲಿ ಭರತ ಹುಣ್ಣಿಮೆಯ ವರ್ಷದ ಕಾರಣಿಕ ನುಡಿಯಲಾಗಿದೆ. ಭಕ್ತರ ಜಯಘೋಷದ ನಡುವೆ ಬಿಲ್ಲನ್ನೇರಿದ ಗೊರವಯ್ಯ ದಿಟ್ಟಿಸಿ ನೋಡುತ್ತಾ ಈ ವರ್ಷದ ಕಾರಣಿಕ ನುಡಿದರು.



ಭರತ ಹುಣ್ಣಿಮೆಯ ದಿನ ನುಡಿಯುವ ಈ ಕಾರಣಿಕವನ್ನು ಅನೇಕ ರೀತಿಯಲ್ಲಿ ವಿಶ್ಲೇಷಿಸಲಾ ಗುತ್ತದೆ. ಈ ಬಾರಿ ಅಂಬಲಿ ರಾಶಿಗೆ ಮುತ್ತಿನ ಗಿಣಿ ಸಮೃದ್ಧಿಯಾಯ್ತಲೇ ಪರಾಕ್ ಎಂದು ಕಾರಣಿಕ ನುಡಿಯಲಾಗಿದ್ದು, ಈ ಬಾರಿ ಮಳೆ ಬೆಳೆಯಾಗಿ ರಾಜ್ಯದ ಜನ ಸಮೃದ್ಧಿಯಿಂದ ಇರುತ್ತಾರೆ ಎಂದು ಹೇಳಲಾಗಿದೆ.

# ಟೀಕೆಗಳಿಗೆ ಉತ್ತರ ಕೊಡಲಾಗಿದೆ – ಎಚ್ಡಿಕೆ

ಬೆಂಗಳೂರು : ಕೇಂದ್ರ ಹಣಕಾಸು ಖಾತೆ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿರುವ 2026–27ನೇ ಸಾಲಿನ ಆಯವ್ಯಯದ ಮೂಲಕ ರಾಜ್ಯ ಕಾಂಗ್ರೆಸ್ ಸರ್ಕಾರ ಮಾಡುತ್ತಿರುವ ಟೀಕೆಗಳಿಗೆ ಉತ್ತರ ಕೊಡಲಾಗಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದರು. ತೆರಿಗೆ ಪಾಲಿನಲ್ಲಿ ಅನ್ಯಾಯ ಆಗಿದೆ ಎಂದು ರಾಜ್ಯ ಸರ್ಕಾರ ಸಾಮಾನ್ಯವಾಗಿ ದೂರುತ್ತಿತ್ತು. 16ನೇ ಹಣಕಾಸು ಆಯೋಗ ಕರ್ನಾಟಕಕ್ಕೆ ಶೇ 4.13ರಷ್ಟು ತೆರಿಗೆ ಪಾಲು ಹಂಚಿಕೆಗೆ ಶಿಫಾರಸು ಮಾಡಿದೆ. 15ನೇ ಹಣಕಾಸು ಆಯೋಗವು ಶೇ 3.64 ಹಂಚಿಕೆ ಮಾಡಿತ್ತು ಎಂದರು.



# ಅನ್ನ ಭಾಗ್ಯದ ಹಣ ನೀಡದಸರಕಾರ: ಗರಂ ಆದ ಟೆಂಗಿನಕಾಯಿ

ಬೆಂಗಳೂರು : ಜನವರಿ ತಿಂಗಳ ಅನ್ನಭಾಗ್ಯದ ಅಕ್ಕಿ ನೀಡದ, ಅಕ್ಕಿಯ ಬದಲು ಹಣವನ್ನೂ ನೀಡದ ರಾಜ್ಯ ಸರ್ಕಾರವನ್ನು ಶಾಸಕ ಮಹೇಶ್ ಟೆಂಗಿನಕಾಯಿ ಜರಿದಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೋತ್ತರದಲ್ಲಿ 2025ರ ಜನವರಿ ತಿಂಗಳ ಪಡಿತರ ಹಣ ಫಲಾನುಭವಿಗಳಿಗೆ ಹಾಕದಿರುವ ಬಗ್ಗೆ ಪ್ರಶ್ನೆ ಕೇಳಿದ್ದೆ. ಸದನದಲ್ಲಿ



ಉತ್ತರದ ವೇಳೆ ಸಚಿವ ಕೆ.ಹೆಚ್. ಮುನಿಯಪ್ಪ ಕೇಂದ್ರ ಸರ್ಕಾರದ ಮೇಲೆ ಹಾಕುವ ಪ್ರಯತ್ನ ಮಾಡಿದರು. ನಾನು ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಅವರ ಜೊತೆ ದೂರವಾಣಿಯಲ್ಲಿ ಮಾತಾಡಿದ್ದೇನೆ. ಬೆಳಗ್ಗೆ ಹಣ ಜಮಾ ಮಾಡಿದರೆ ಸಂಜೆ ಅಕ್ಕಿ ಹಾಕುತ್ತೇವೆ ಎಂದು ಕೇಂದ್ರ ಸಚಿವರು ಹೇಳಿದ್ದಾರೆ ಎಂದು ತಿಳಿಸಿದರು.

# ಬಿಜೆಪಿ ನೈತಿಕತೆಯ ಪಾಠ ಮಾಡುವುದು ಹೇಸಿಗೆತನದ ಪರಮಾವಧಿ : ಬಿ.ಕೆ ಹರಿಪ್ರಸಾದ್




ಬೆಂಗಳೂರು : ಭೂತದ ಬಾಯಲ್ಲಿ ಭಗವದ್ಗೀತೆ ಕೇಳುವುದು ಒಂದೇ, ಬಿಜೆಪಿಯವರಿಂದ ಘನತೆ, ಗೌರವ ಸಂಸ್ಕೃತಿಯ ಬಿಟ್ಟಿ ಪಾಠ ಕೇಳುವುದು ಒಂದೇ. ಸದನಗಳ ಘನತೆ, ಗೌರವವನ್ನು ಮೂರಾಬಟ್ಟೆ ಮಾಡಿರುವ ಬಿಜೆಪಿ ನೈತಿಕತೆಯ ಪಾಠ ಮಾಡುವುದು ಹೇಸಿಗೆತನದ ಪರಮಾವಧಿ ಎಂದು ಕಾಂಗ್ರೆಸ್ ನಾಯಕ ಬಿ.ಕೆ ಹರಿಪ್ರಸಾದ್ ಹರಿಹಾಯ್ದಿದ್ದಾರೆ. ಬಿಜೆಪಿ ಪಕ್ಷದವರು ಸದನದಲ್ಲಾಗಲಿ, ಸಾರ್ವಜನಿಕ ವೇದಿಕೆಯಲ್ಲಾಗಲಿ ಮಹಿಳೆಯರ ಬಗ್ಗೆ, ಜನಪ್ರತಿನಿಧಿಗಳ ಬಗ್ಗೆ ಉದುರಿಸುವ ಒಂದೊಂದು ಮುತ್ತುಗಳನ್ನು ನೋಡಿ ಜನ ಸಾಮಾನ್ಯರು ಹಾದಿ ಬೀದಿಯಲ್ಲಿ ಉಗಿಯುತ್ತಿರುವುದನ್ನು ಮರೆತಂತಿದೆ ಎಂದರು.

# ಬೆಂಗಳೂರಿನಿಂದ ಕುಶಾಲನಗರಕ್ಕೆ ಹೊಸ ರಸ್ತೆ !

ಮೈಸೂರು:ಮೈಸೂರು–ಕುಶಾಲನಗರ ಹೆದ್ದಾರಿಯ 92 ಕಿ.ಮೀ. ಪೈಕಿ 84 ಕಿ.ಮೀ. ಉದ್ದದ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಹೊಸತಾಗಿ ನಿರ್ಮಿಸುತ್ತಿದೆ. ಬೆಂಗಳೂರಿನಿಂದ ಕುಶಾಲನಗರಕ್ಕೆ ಹೋಗುವವರು ಮೈಸೂರಿನ ಸಂಪರ್ಕಕ್ಕೆ ಬಾರದೆಯೇ ಪ್ರಯಾಣ ಮುಂದುವರಿಸಬಹುದು. ಬೆಂಗಳೂರು–ಮೈಸೂರು ಹೊಸ



ಹೆದ್ದಾರಿಗೆ ಹೊಂದಿಕೊಂಡಂತೆಯೇ ಶ್ರೀರಂಗಪಟ್ಟಣ ಬೊಮ್ಮೂರು ಅಗ್ರಹಾರ ಗ್ರಾಮದ ಬಳಿ ವರ್ತುಲ ಮಾದರಿಯ 'ಟ್ರಂಪೆಡ್' ರಸ್ತೆ ನಿರ್ಮಾಣವಾಗಲಿದ್ದು, ಇದು ಕುಶಾಲನಗರ ಹೆದ್ದಾರಿಗೆ 'ಸೇತುವೆ' ಆಗಲಿದೆ. 'ಪ್ಯಾಕೇಜ್–5' ಕಾಮಗಾರಿಯ ಕೊನೆಯ ಹಂತದಲ್ಲಿ ಈ ಸಂಪರ್ಕ ಸೇತು ಮಾರ್ಗ ನಿರ್ಮಾಣವಾಗಲಿದೆ.

# ರಾಹುಲ್ ಗಾಂಧಿಯನ್ನು ದೇಶದ ಶತ್ರುಗಳ ಮಿತ್ರ ಎಂದ ಸಚಿವ ಬಿಟ್ಟು

ನವದೆಹಲಿ: ಭಾರತೀಯ ರಾಜಕಾರಣದಲ್ಲಿ ಮಾತಿನ ಚಕಮಕಿ ಹೊಸದೇನಲ್ಲ, ಆದರೆ ಇತ್ತೀಚಿನ ದಿನಗಳಲ್ಲಿ ಬಳಸಲಾಗುತ್ತಿರುವ ಪದ ಬಳಕೆಗಳು ರಾಜಕೀಯ ಕಡುವೈರವನ್ನು ಎತ್ತಿ ತೋರಿಸುತ್ತಿವೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಕೇಂದ್ರ ಸಚಿವ ರವನೀತ್ ಸಿಂಗ್ ಬಿಟ್ಟು ಅವರನ್ನು ದೇಶದ್ರೋಹಿ ಎಂದು ಕರೆದ ಬೆನ್ನಲ್ಲೇ, ರಾಹುಲ್ ಗಾಂಧಿಯನ್ನು ದೇಶದ ಶತ್ರುಗಳ ಮಿತ್ರ ಎಂದು ಕರೆಯುವ ಮೂಲಕ ತಿರುಗೇಟು ನೀಡಿದ್ದಾರೆ. ಸಂಸತ್ತಿನ ಮಕರ ದ್ವಾರದ ಬಳಿ ಪ್ರತಿಭಟನೆ ನಡೆಸುತ್ತಿದ್ದ ಕಾಂಗ್ರೆಸ್ ಸಂಸದರ ನಡುವೆ ರಾಹುಲ್ ಗಾಂಧಿ ಇದ್ದರು.



# ರಕ್ಷಣಾ ಸಚಿವಾಲಯಕ್ಕೆ 7.8 ಲಕ್ಷ ಕೋಟಿ ಮೀಸಲು

ನವದೆಹಲಿ : ಬಜೆಟ್‌ನಲ್ಲಿ ಭಾರತೀಯ ಸೇನೆಗೆ ಸಿಕ್ಕಿರೋ ಪಾಲು ನೋಡಿದ್ರೆ ಎಂಥವರಿಗೂ ರೋಮಾಂಚನ ಆಗುತ್ತೆ. ರಕ್ಷಣಾ ಸಚಿವಾಲಯಕ್ಕೆ ಬರೋಬ್ಬರಿ 7.8 ಲಕ್ಷ ಕೋಟಿ ರೂಪಾಯಿ ಮೀಸಲಿಡಲಾಗಿದೆ. ಇದ್ರಲ್ಲಿ ಕುತೂಹಲಕಾರಿ ವಿಷಯ ಏನಂದ್ರೆ, ನಮ್ಮ ಪಾಕಿಸ್ತಾನದ ಒಟ್ಟು ಬಜೆಟ್‌ಗಿಂತ ನಮ್ಮ




ಡಿಫೆನ್ಸ್ ಬಜೆಟ್ ಜಾಸ್ತಿ ಇದೆ. ಪಾಕಿಸ್ತಾನದ 2025–26ರ ಒಟ್ಟು ಬಜೆಟ್ ಸುಮಾರು 17.6 ಟ್ರಿಲಿಯನ್ ಪಾಕಿಸ್ತಾನಿ ರೂಪಾಯಿ. ಅದನ್ನ ನಮ್ಮ ಇಂಡಿಯನ್ ರೂಪಾಯಿಗೆ ಕನ್ವರ್ಟ್ ಮಾಡಿದ್ರೆ ಸರಿಸುಮಾರು 5.3 ಲಕ್ಷ ಕೋಟಿ ಆಗುತ್ತೆ. ಆದ್ರೆ ನಮ್ಮ ರಕ್ಷಣಾ ಇಲಾಖೆಗೆ ಸಿಕ್ಕಿರೋದು 7.8 ಲಕ್ಷ ಕೋಟಿ.

# ಬಜೆಟ್‌ನಲ್ಲಿ 'ಮಹಾತ್ಮ ಗಾಂಧಿ ಗ್ರಾಮ ಸ್ವರಾಜ್ ಯೋಜನೆ' ಪ್ರಕಟ



ನವದೆಹಲಿ : ಬಜೆಟ್‌ನಲ್ಲಿ 'ಮಹಾತ್ಮ ಗಾಂಧಿ' ಹೆಸರಿನಲ್ಲಿ ಹೊಸ ಯೋಜನೆಯೊಂದನ್ನು ಜಾರಿಗೆ ತಂದಿರುವುದಾಗಿ ನಿರ್ಮಲಾ ಸೀತಾರಾಮನ್ ಘೋಷಿಸಿದ್ದಾರೆ. ಖಾದಿ, ಕೈಮಗ್ಗ ಮತ್ತು ಕರಕುಶಲ ವಲಯವನ್ನು ಬಲಪಡಿಸುವ ಉದ್ದೇಶದಿಂದ 'ಮಹಾತ್ಮ ಗಾಂಧಿ ಗ್ರಾಮ ಸ್ವರಾಜ್ ಯೋಜನೆ'ಯನ್ನು ಜಾರಿಗೆ ತರುವುದಾಗಿ ನಿರ್ಮಲಾ ಪ್ರಕಟಿಸಿದ್ದಾರೆ. 'ಮಹಾತ್ಮ ಗಾಂಧಿ ಗ್ರಾಮ ಸ್ವರಾಜ್ ಯೋಜನೆ'ಯ ಮೂಲಕ ಖಾದಿ ಉದ್ಯಮ ಮತ್ತು ಕರಕುಶಲ ವಸ್ತುಗಳ ಉತ್ಪಾದನೆ, ತರಬೇತಿ, ಕೌಶಲಾಭಿವೃದ್ಧಿ ಮತ್ತು ಜಾಗತಿಕ ಮಾರುಕಟ್ಟೆ ಪ್ರವೇಶಕ್ಕೆ ಅವಕಾಶ ಹೆಚ್ಚಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದೂ ಅವರು ವಿವರಿಸಿದ್ದಾರೆ.

# ಸೇನೆಯ ಬತ್ತಳಿಕೆ ಸೇರಿರುವ ನೂತನ ಅಸ್ತ್ರ ಸೂರ್ಯಾಸ್ತ್ರ ರಾಕೆಟ್ ಲಾಂಚರ್

ನವದೆಹಲಿ: ಭಾರತೀಯ ಸೇನೆಯ ಬತ್ತಳಿಕೆ ಸೇರಿರುವ ನೂತನ ಅಸ್ತ್ರ ಸೂರ್ಯಾಸ್ತ್ರ ರಾಕೆಟ್ ಲಾಂಚರ್ ಇದೀಗ ಜಗತ್ತಿನ ಕೇಂದ್ರಬಿಂದುವಾಗಿದ್ದು, ಭಾರತ–ಇಸ್ರೇಲ್ ಜಂಟಿ ಸಹಭಾಗಿತ್ವದ ಈ ದೀರ್ಘ–ಶ್ರೇಣಿಯ ಬಹು–ಕ್ಯಾಲಿಬರ್, ಭಾರತದ ಸ್ವದೇಶಿ ನಿರ್ಮಿತ ಸೂರ್ಯಾಸ್ತ್ರ ರಾಕೆಟ್ ಲಾಂಚರ್ ಗಳನ್ನು



ಸೇನೆಗೆ ಸೇರ್ಪಡೆಗೊಳಿಸಲು ಸೇನೆ ಸಿದ್ಧತೆ ನಡೆಸಿದೆ. ಈಗಾಗಲೇ 2 ಸೂರ್ಯಾಸ್ತ್ರ ರಾಕೆಟ್ ಲಾಂಚರ್‌ಗಳನ್ನು ಸೇನೆ ಬರ ಮಾಡಿಕೊಂಡಿದ್ದು, ಶೀಘ್ರದಲ್ಲೇ ಇದರ ಪ್ರಯೋಗ ಕೂಡ ನಡೆಸಲು ಸಿದ್ಧತೆ ನಡೆಸಿದೆ. ಈ ಸೂರ್ಯಾಸ್ತ್ರ ರಾಕೆಟ್ ಲಾಂಚರ್ ಅನ್ನು ಭಾರತ ಮತ್ತು ಇಸ್ರೇಲ್ ಸಹಭಾಗಿತ್ವದಲ್ಲಿ ನಿರ್ಮಿಸಲಾಗಿದೆ.

# 1961ರ ಕಾಯ್ದೆಯ ಬದಲು ಹೊಸ ಆದಾಯ ತೆರಿಗೆ ಕಾಯ್ದೆ!

ನವದೆಹಲಿ : ಕೇಂದ್ರ ಸರ್ಕಾರವು ದಶಕಗಳ 1961ರ ಆದಾಯ ತೆರಿಗೆ ಕಾಯ್ದೆಯನ್ನು ಬದಲಿಸಿ, ಹೊಸ 'ಆದಾಯ ತೆರಿಗೆ ಕಾಯ್ದೆ 2025' ಅನ್ನು ಪರಿಚಯಿಸಿದೆ. ಇದು ಏಪ್ರಿಲ್ 1, 2026 ರಿಂದ ಜಾರಿಗೆ ಬರಲಿದೆ. ಆದಾಯ ತೆರಿಗೆ ರಿಟರ್ನ್ಸ್ ಸಲ್ಲಿಸಲು ವಿವಿಧ ವ್ಯವಸ್ಥೆಗಳು ಮತ್ತು ಅನುಸರಣೆಯನ್ನು ಸರಾಗಗೊಳಿಸುವ ಮತ್ತು ಮೊಕದ್ದಮೆಗಳನ್ನು ಕಡಿಮೆ ಮಾಡುವ ಗುರಿಯನ್ನು ಹೊಂದಿರುವ ಕ್ರಮಗಳನ್ನು ಜಾರಿಗೆ ತರಲಾಗುವುದು ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಲೋಕಸಭೆಯಲ್ಲಿ ಬಜೆಟ್ ಮಂಡಿಸುತ್ತಾ ಘೋಷಿಸಿದರು.



# ಪ್ರಧಾನಿ ಮೇಲೆ ದಾಳಿ ಮಾಡುವ ಸಾಧ್ಯತೆ ಇತ್ತು : ಮನೋಜ್ ತಿವಾರಿ

ನವದೆಹಲಿ : ವಿರೋಧ ಪಕ್ಷದ ಹಲವಾರು ಮಹಿಳಾ ಸಂಸದರು ಸದನದ ಬಾವಿಗಿಳಿದು, ಪ್ರಧಾನಿಯವರ ಕುರ್ಚಿಯ ಕಡೆಗೆ ಸಾಗಿದರು. ತಮ್ಮ ಸ್ಥಾನಗಳಿಗೆ ಮರಳುವಂತೆ ಹಿರಿಯ ಸಚಿವರು ಮನವಿ ಮಾಡಿದರು ಅವರೆಲ್ಲಾ ನಿರ್ಲಕ್ಷಿಸಿದ್ದಾರೆ, ಪರಿಸ್ಥಿತಿ ನಿಯಂತ್ರಣ ತಪ್ಪಿದ್ದರಿಂದ ಪ್ರಧಾನಮಂತ್ರಿಗಳ ಭಾಷಣವನ್ನು ಮುಂದೂಡಬೇಕಾಯಿತು ಎಂದು ತಿವಾರಿ ಮಾಹಿತಿ ನೀಡಿದರು. ವಿರೋಧ ಪಕ್ಷದ ಸಂಸದರು ಆಕ್ರಮಣಕಾರಿಯಾಗಿ ವರ್ತಿಸಿದರು ಎಂದರು.



ಕರಾವಳಿ ತರಂಗಿಣಿ
ಕಲಾ ತರಂಗಿಣಿ

# ಅಮೃತ – ಅಂಜನ್‌ಗೆ ಯಶ್ ಕಡೆಯಿಂದ ವಿಶ್

ಅಮೃತಾಂಜನ್ ಎಲ್ಲರಿಗೂ ನೆನಪಿದ್ದೇ ಇರುತ್ತೆ ಅಲ್ವಾ. ಶಾರ್ಟ್ ಮೂವಿಯಲ್ಲಿಯೇ ಎಷ್ಟು ನಕ್ಕಿದ್ದು. ಒಮ್ಮೆ ನೋಡಿದ್ದವರು ಮತ್ತೆ ಮತ್ತೆ ನೋಡುವಂತೆ ಮಾಡಿದ್ದು ಅಮೃತಾಂಜನ್. ಈಗ ಅದೇ ತಂಡ ಜೊತೆಯಾಗಿ ಶಾರ್ಟ್ ಮೂವಿಯನ್ನ ಬೆಳ್ಳಿ ತೆರೆಮೇಲೆ ತಂದಿದ್ದಾರೆ. ಇಂದಿನಿಂದ ರಾಜ್ಯಾದ್ಯಂತ ರಿಲೀಸ್ ಆಗಿದೆ. ಇದರ ನಡುವೆ ಇಡೀ ಸಿನಿಮಾ ತಂಡ ಖುಷಿ ಪಡುವಂತ ಘಟನೆಯೊಂದು ಸಂಭವಿಸಿದೆ. ಅದು ಯಶ್ ಅವರ ಕಡೆಯಿಂದ. ಯಶ್ ಪ್ಯಾನ್ ಇಂಡಿಯಾ ಸ್ಟಾರ್. ಬರೀ ಸ್ಟಾರ್ ಅಲ್ಲ ಎಲ್ಲಾ ಇಂಡಸ್ಟ್ರೀ ಇಷ್ಟಪಡುವ, ಬೇಡಿಕೆ ಇರುವ, ಎಲ್ಲಾ ಭಾಷೆಯ ಅಭಿಮಾನಿಗಳು ಹೊತ್ತು ಮೆರೆಸುವಂತ ಹೀರೋ. ಟಾಕ್ಸಿಕ್ ಸಿನಿಮಾ ಮೂಲಕ ಮತ್ತೊಂದು ರೆಕಾರ್ಡ್ ಮಾಡೋದಕ್ಕೆ ರೆಡಿಯಾಗ್ತಿದ್ದಾರೆ. ರಾಮಾಯಣ ಶೆಡ್ಯೂಲ್, ಟಾಕ್ಸಿಕ್ ಬ್ಯುಸಿಯ ನಡುವೆ ಈ ಹೊಸ ತಂಡವನ್ನ ಹಾರೈಸಿದ್ದಾರೆ ಅಂದ್ರೆ ಚಿತ್ರತಂಡಕ್ಕೆ ಆನೆ ಬಲ ಬಂದಷ್ಟು ಸಂತಸವಾಗದೆ ಇರುತ್ತಾ ಹೇಳಿ. ಹೌದು ರಾಕಿ ಬಾಯ್ ತಮ್ಮ ಮಿಲಿಯನ್ ಗಟ್ಟಲೆ ಫಾಲೋವರ್ಸ್ ಇರುವಂತ ಸೋಷಿಯಲ್ ಮೀಡಿಯಾದಲ್ಲಿ ಚಿತ್ರತಂಡದವರನ್ನ ಟ್ಯಾಗ್ ಮಾಡಿ ವಿಶ್ ಮಾಡಿದ್ದಾರೆ. 'ನಿಮ್ಮ ಕೆಲಸವನ್ನು ನಾನು ಕೂಡ ಆನಂದಿಸಿದ್ದೇನೆ. ನೀವುಗಳು ದೊಡ್ಡ ಕನಸು ಕಾಣುತ್ತಿರುವುದು, ಅದನ್ನು ಈಡೇರಿಸಿಕೊಳ್ಳುವುದಕ್ಕೆ ಪ್ರಯತ್ನ ಪಡುತ್ತಿರುವುದನ್ನು ನೋಡುವುದಕ್ಕೇನೆ ಸಂತೋಷವಾಗುತ್ತದೆ. ಒಂದು ಕಂಟೆಂಟ್ ರಚಿಸಿ, ಅದನ್ನ ಸಿನಿಮಾದ ತನಕ ತಂದಿರುವ ನಿಮ್ಮ ಪ್ರಯಾಣವೇ ಎಲ್ಲವನ್ನು ಹೇಳುತ್ತದೆ. ಅಮೃತಾಂಜನ್ ತಂಡಕ್ಕೆ ಶುಭವಾಗಲಿ ಎಂದು ಹಾರೈಸಿದ್ದಾರೆ. ಜ್ಯೋತಿರಾವ್ ಮೋಹಿತ್ ಸಿನಿಮಾಗೆ ಆಕ್ಷನ್‌ಕಟ್ ಹೇಳಿದ್ದಾರೆ. ಗೌರವ್ ಶೆಟ್ಟಿ, ಶ್ರೀಭವ್ಯಾ, ಕಾರ್ತಿಕ್ ರೆಡ್ಡಿ, ಸುಧಾಕರ್, ಪಾಯಲ್ ಚೆಂಗಪ್ಪ ನಟಿಸಿದ್ದು, ರಾಘವೇಂದ್ರ ಸಂಗೀತ ಸಂಯೋಜನೆಯ 3 ಹಾಡುಗಳಿವೆ. ಸುಮಂತ್ ಆಚಾರ್ಯ ಕ್ಯಾಮೆರಾ ವರ್ಕ್ ಮಾಡಿದ್ದಾರೆ.



# 'ಸರಳ ಸುಬ್ಬರಾವ್' ಪ್ರೇಮಿಗಳ ದಿನದಂದು ತೆರೆಗೆ

ರಿಯಾನ್ ಕ್ರಿಯೇಷನ್ಸ್ ಲಾಂಛನದಲ್ಲಿ ಲೋಹಿತ್ ನಂಜುಂಡಯ್ಯ ನಿರ್ಮಿಸಿರುವ, ಸದಭಿರುಚಿ ಚಿತ್ರಗಳ ನಿರ್ದೇಶಕ ಮಂಜು ಸ್ವರಾಜ್ ನಿರ್ದೇಶನದಲ್ಲಿ ಅಜೇಯ್ ರಾವ್ ಹಾಗೂ ಮಿಶಾ ನಾರಂಗ್ ನಾಯಕ, ನಾಯಕಿಯಾಗಿ ನಟಿಸಿರುವ ಮತ್ತು 1970ರ ಕಾಲಘಟ್ಟದ ಪ್ರೇಮ ಕಥಾನಕ ಹೊಂದಿರುವ 'ಸರಳ ಸುಬ್ಬರಾವ್' ಚಿತ್ರದ ಟ್ರೇಲರ್ ಬಿಡುಗಡೆಯಾಗಿದೆ. ನಿರೀಕ್ಷೆಗೂ ಮೀರಿ ಟ್ರೇಲರ್‌ಗೆ ಮೆಚ್ಚುಗೆಯಾಗುತ್ತಿದೆ. ಫೆಬ್ರವರಿ 12ರಂದು ಚಿತ್ರ ಬಿಡುಗಡೆಯಾಗಲಿದೆ. ಟ್ರೇಲರ್ ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. 'ಸರಳ ಸುಬ್ಬರಾವ್' 1970ರ ಕಾಲಘಟ್ಟದ ಪ್ರೇಮಕಥೆ. ಇಂದು ಟ್ರೇಲರ್ ಬಿಡುಗಡೆಯಾಗಿದೆ. ಚಿತ್ರ ಫೆಬ್ರವರಿ 12 ರಂದು ತೆರೆಗೆ ಬರಲಿದೆ. ತ್ರಿವೇಣಿ ಅವರ ಕಾದಂಬರಿ ಆಧರಿಸಿದ ಕಥೆ ಇದು. ಈವರೆಗೂ ಕನ್ನಡದಲ್ಲಿ ತ್ರಿವೇಣಿ ಅವರ ಕಾದಂಬರಿಗಳನ್ನು ಆಧರಿಸಿ ಬಂದಿರುವ ಚಿತ್ರಗಳೆಲ್ಲಾ ಗೆದ್ದಿದೆ. ಕನ್ನಡದಲ್ಲಿ ತೀರ ಅಪರೂಪ ಎನ್ನಬಹುದಾದ ಕಥೆ ಕೂಡ. ನಮ್ಮ ಚಿತ್ರ ಎಲ್ಲರಿಗೂ ಮೆಚ್ಚುಗೆಯಾಗುವ ಭರವಸೆ ಇದೆ. ಹೆಚ್ಚು ಕಡಿಮೆ ನೂರು ವರ್ಷಗಳ ಇತಿಹಾಸವಿರುವ ಮೈಸೂರಿನ ಮನೆಯೊಂದರಲ್ಲಿ ನಮ್ಮ ಚಿತ್ರದ ಚಿತ್ರೀಕರಣ ನಡೆದಿದೆ. ಈಗಾಗಲೇ ಟೀಸರ್, ಟ್ರೇಲರ್ ಹಾಗೂ ಹಾಡುಗಳ ಮೂಲಕ ನಮ್ಮ ಚಿತ್ರ ನೋಡುಗರ ಮನ ಗೆದ್ದಿದೆ. ಅಜೇಯ್ ರಾವ್ ನಾಯಕರಾಗಿ ನಟಿಸಿರುವ ಈ ಚಿತ್ರದ ನಾಯಕಿ ಪಂಜಾಬಿನ ಮಿಶಾ ನಾರಂಗ್. ರಂಗಾಯಣ ರಘು, ವೀಣಾ ಸುಂದರ್, ಶ್ರೀರಘು ರಾಮನಕೊಪ್ಪ, ವಿಜಯ್ ಚಂಡೂರ್ ಹೀಗೆ ದೊಡ್ಡ ತಾರಾಬಳಗವೇ ಈ ಚಿತ್ರದಲ್ಲಿದೆ. ಅಂತರಾಷ್ಟ್ರೀಯ ಖ್ಯಾತಿಯ ಅಜನೀಶ್ ಲೋಕನಾಥ್ ಸಂಗೀತ ನೀಡಿದ್ದಾರೆ. ಪ್ರದೀಪ್ ಪದ್ಮಕುಮಾರ್ ಛಾಯಾಗ್ರಹಣ ಹಾಗೂ ಬಸವರಾಜ್ ಅರಸ್ ಸಂಕಲನ "ಸರಳ ಸುಬ್ಬರಾವ್" ಚಿತ್ರಕ್ಕಿದೆ ಎಂದು ನಿರ್ದೇಶಕ ಮಂಜು ಸ್ವರಾಜ್ ತಿಳಿಸಿದರು. ನಾನು ಹುಟ್ಟಿದ್ದು 1980ರಲ್ಲಿ. ಈ ಚಿತ್ರದ ಕಥೆ ನಡೆಯುವುದು 1970ರ ಕಾಲಘಟ್ಟದಲ್ಲಿ ಎಂದು ಮಾತನಾಡಿದ ನಾಯಕ ಅಜೇಯ್ ರಾವ್, ಕನ್ನಡದಲ್ಲಿ ಅಪರೂಪ ಎನ್ನಬಹುದಾದ ಕಥೆಯನ್ನು ನಿರ್ದೇಶಕ ಮಂಜು ಸ್ವರಾಜ್ ಹಾಗೂ ನಿರ್ಮಾಪಕ ಲೋಹಿತ್ ಆಯ್ಕೆ ಮಾಡಿಕೊಂಡಿದ್ದಾರೆ. ಟ್ರೇಲರ್ ಎಲ್ಲರ ಗಮನ ಸೆಳೆದಿದೆ.



# ನೆನಪುಗಳ ಮಾತು ಮಧುರ

RED & WHITE ಸೆವೆನ್‌ರಾಜ್ ನಿರ್ಮಾಣದ ಹಾಗೂ ಅಫ್ಜಲ್ ನಿರ್ದೇಶನದ 'ನೆನಪುಗಳ ಮಾತುಮಧುರ' ಚಿತ್ರ ಈ ವಾರ (ಫೆಬ್ರವರಿ 6) ರಂದು ತೆರೆಗೆ ಬರಲಿದೆ. 'ನೆನಪುಗಳ ಮಾತು ಮಧುರ' ಚಿತ್ರದಲ್ಲಿ ನಾಲ್ಕು ಸ್ನೇಹಿತರ ನಡುವೆ ನಡೆಯುವ ನಾಲ್ಕು ಕಥೆಗಳ ಗುಚ್ಛವಿದೆ. (ANTHOLOGY TYPE) ಕಥಾ ಹಂದರದ ಹೊಂದಿರುವ ಈ ಚಿತ್ರದಲ್ಲಿ ಮರ್ಡರ್ ಮಿಸ್ಟ್ರಿ, ಹಾರರ್ , ಹಾಸ್ಯ, ಈಗಿನ ಕಾಲದ ಯುವಕರ ಜೀವನದಲ್ಲಿ ನಡೆಯುತ್ತಿರುವ ಕೆಲವು ವಿಭಿನ್ನ ಅಂಶಗಳು ಇರಲಿದೆ ಎನ್ನುತ್ತಾರೆ ನಿರ್ದೇಶಕ ಅಫ್ಜಲ್. ಅಫ್ಜಲ್ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶಿಸಿರುವ ಈ ಚಿತ್ರಕ್ಕೆ ಸ್ವಾಮಿ ಮೈಸೂರು ಛಾಯಾಗ್ರಹಣ, ರಾಜು ಎಮ್ಮಿಗನೂರು ಸಂಗೀತ ನಿರ್ದೇಶನ, ಕಾರ್ತಿಕ್ ಈಶ್ವರಾಚಾರಿ ಸಂಕಲನ ಹಾಗೂ ದೇವರಾಜ ಕುಷ್ಟಗಿ ಅವರ ಹಿನ್ನೆಲೆ ಸಂಗೀತವಿದೆ. ಈ ಚಿತ್ರದ ಮುಖ್ಯಪಾತ್ರದಲ್ಲಿ ನಿರ್ಮಾಪಕ ಸೆವೆನ್ ರಾಜ್ ಸಹ ನಟಿಸಿದ್ದಾರೆ. ವಸಿಷ್ಠ ಬಂಟ ನೂರು, ರಣವೀರ್, ರಾಜಪ್ರಭು, ವಿನಯ್, ಅಂಜಲಿ, ಸೌಮ್ಯ, ರೇಖಾ ರಮೇಶ್, ಶುಭ ತೀರ್ಥ, ವಾದ್ಯಾ, ಗುಬ್ಬಚ್ಚಿ, ಅರವಿಂದ್, ಮುಂತಾದವರು ತಾರಾಬಳಗದಲ್ಲಿದ್ದಾರೆ.



# ಪ್ರಣಾಮ್ ಈಗ 'ಎಂಜಿಆರ್' ಟೈಟಲ್ ಲಾಂಚ್ ಮಾಡಿದ ದೇವರಾಜ್

ಡೈನಾಮಿಕ್ ವೆಂಚರ್ಸ್ ಹಾಗೂ ಪುರಾತನ ಫಿಲಂ ಪ್ರೊಡಕ್ಷನ್ಸ್ ಸಹಯೋಗದಲ್ಲಿ ನೂತನ ಚಿತ್ರವೊಂದು ನಿರ್ಮಾಣವಾಗುತ್ತಿದೆ. ಪ್ರಜ್ವಲ್ ದೇವರಾಜ್ ಈ ಚಿತ್ರದ ಮೂಲಕ ನಿರ್ಮಾಣಕ್ಕಿಳಿದಿದ್ದಾರೆ. 'ಎಂಜಿಆರ್' ಎಂಬ ವಿಶೇಷ ಶೀರ್ಷಿಕೆ ಈ ಚಿತ್ರಕ್ಕಿದೆ. ಚಿತ್ರದ ನಾಯಕ ಪ್ರಣಾಮ್ ದೇವರಾಜ್ ಅವರ ಹುಟ್ಟುಹಬ್ಬದ ಪ್ರಯುಕ್ತ ಚಿತ್ರದ ಟೈಟಲ್ ಹಾಗೂ ಫಸ್ಟ್ ಲುಕ್ ಲಾಂಚ್ ಕಾರ್ಯಕ್ರಮ ಬುಧವಾರ ಸಂಜೆ ನಡೆಯಿತು. ಮುಖ್ಯ ಅತಿಥಿಯಾಗಿದ್ದ ಹಿರಿಯನಟ ದೇವರಾಜ್ ಅವರು ಮಗನ ಚಿತ್ರಕ್ಕೆ ಶುಭ ಹಾರೈಸುತ್ತ ಇದೊಂದು ಸಂತಸದ ಕ್ಷಣ. ನಾನು ಚಿತ್ರರಂಗಕ್ಕೆ ಬಂದು 30 ವರ್ಷಗಳಾದ ಮೇಲೆ ನಿರ್ಮಾಪಕನಾದೆ. ಈಗ ನನ್ನ ಮಗ 10–12 ವರ್ಷಗಳಿಗೇ ನಿರ್ಮಾಪಕನಾ ಗಿದ್ದಾನೆ. ನಮಗೆ ಸಿನಿಮಾ ಬಿಟ್ಟು ಬೇರೇನೂ ಗೊತ್ತಿಲ್ಲ. ಇದರಲ್ಲೇ ಏನಾದರೂ ಮಾಡಬೇಕೆಂಬ ತುಡಿತವಿರುತ್ತದೆ. ಪುರಾ ತನ ಫಿಲಂಸ್ ಮಗನ ಜತೆ ಎರಡನೇ ಸಿನಿಮಾ ಮಾಡ್ತಿದಾರೆ. ಈ ಪೋಸ್ಟರ್‌ನಲ್ಲಿ ಪ್ರಣಾಮ್ ಲುಕ್ ನೋಡಿ ನನಗೇ ಆಶ್ಚ ರ್ಯವಾಯ್ತು. ಮಾಸ್ ಲುಕ್‌ನಲ್ಲಿ ಕಾಣಿಸಿಕೊಂಡಿದ್ದಾನೆ. ಚರಣರಾಜ್ ನನಗೆ ಇಷ್ಟವಾದ ಮ್ಯೂಸಿಕ್ ಡೈರೆಕ್ಟರ್. ಅವರ ಹಾಡುಗಳು ನಮ್ಮ ಸೊಗಡನ್ನು ಬಿಟ್ಟು ಹೋಗುವುದಿಲ್ಲ. ಡಿಓಪಿ ಕೃಷ್ಣ ಮುತ್ತಣ್ಣ ಚಿತ್ರದಲ್ಲಿ ಚೆನ್ನಾಗಿ ಕೆಲಸ ಮಾಡಿದ್ದಾರೆ. ಹೀಗೆ ನಮ್ಮನ್ನು ಅರ್ಥ ಮಾಡಿಕೊಂಡವರ ಜತೆ ಕೆಲಸ ಮಾಡುವುದಕ್ಕೆ ಖುಷಿ ಆಗುತ್ತದೆ ಎಂದು ಹೇಳಿದರು. ಪುರಾತನ ಫಿಲಂಸ್ ಎಕ್ಸಿಕ್ಯೂಟಿವ್ ಪ್ರೊಡ್ಯೂಸರ್ ದಿವ್ಯ ಕೀರ್ತಿ ಮಾತನಾಡುತ್ತ ಪ್ರಜ್ವಲ್ ಅವರ ಜತೆ ಪ್ರೊಡ್ಯೂಸ್ ಮಾಡುವುದಕ್ಕೆ ತುಂಬಾ ಖುಷಿ ಆಗ್ತಿದೆ ಎಂದರು. ನಿರ್ದೇಶಕ ಶ್ರೀಕಾಂತ್ ಹುಣಸೂರು ಮಾತನಾಡಿ ಪ್ರಣಾಂ ಜತೆ ಮುತ್ತಣ್ಣ ನಂತರ ಇದು ಎರಡನೇ ಚಿತ್ರ. ಎಂಜಿಆರ್ ಅಂದ್ರೆ ಏನಂತ ಮುಂದಿನ ದಿನಗಳಲ್ಲಿ ಹೇಳುತ್ತೇವೆ ಎಂದರು.



# 'ಸೀತಾ ಪಯಣ' ಚಿತ್ರದ 'ಪಯಣವೇ' ಹಾಡು ಬಿಡುಗಡೆ



ಬಹುಭಾಷಾ ನಟ, 'ಆಕ್ಷನ್ ಕಿಂಗ್' ಅರ್ಜುನ್ ಸರ್ಜಾ ಅವರ ನಿರ್ದೇಶನದಲ್ಲಿ ಮೂಡಿಬರುತ್ತಿರುವ ಬಹುನಿರೀಕ್ಷಿತ 'ಸೀತಾ ಪಯಣ' ಚಿತ್ರದ ಮೆಲೋಡಿ ಹಾಡು 'ಪಯಣವೇ..' ಬಿಡುಗಡೆಯಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಭರ್ಜರಿ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಈ ಹಾಡಿನ ಮೂಲಕ ಅರ್ಜುನ್ ಸರ್ಜಾ ಅವರ ಪುತ್ರಿ ಐಶ್ವರ್ಯ ಅರ್ಜುನ್ ನಾಯಕಿಯಾಗಿ ಮಿಂಚುತ್ತಿದ್ದು, ಅವರ ಸ್ಕ್ರೀನ್ ಪ್ರೆಸೆನ್ಸ್ ಮತ್ತು ಗ್ಲಾಮರ್ ಪ್ರೇಕ್ಷಕರ ಮನ ಗೆಲ್ಲುತ್ತಿದೆ. ತಾರಾಗಣದ ಮೆರುಗು ಶ್ರೀ ರಾಮ್ ಫಿಲ್ಮ್ ಇಂಟರ್ನ್ಯಾಷನಲ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗಿರುವ ಈ ಚಿತ್ರದಲ್ಲಿ ನಿರಂಜನ್ ನಾಯಕನಾಗಿ ನಟಿಸಿದ್ದಾರೆ. ವಿಶೇಷವೆಂದರೆ, ಚಿತ್ರದಲ್ಲಿ ದಿಗ್ಗಜ ನಟರಾದ ಸತ್ಯರಾಜ್, ಪ್ರಕಾಶ್ ರೈ ಮತ್ತು ಕೋವೈ ಸರಳಾ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಅರ್ಜುನ್ ಸರ್ಜಾ ಒಂದು ವಿಶಿಷ್ಟ ಪಾತ್ರದಲ್ಲಿ ನಟಿಸಿದ್ದಾರೆ. ಅವರ ಸೋದರಳಿಯ 'ಆಕ್ಷನ್ ಪ್ರಿನ್ಸ್' ಧ್ರುವ ಸರ್ಜಾ ವಿಶೇಷ ಅತಿಥಿ ಪಾತ್ರದಲ್ಲಿ ನಟಿಸಿದ್ದಾರೆ.

# ಸೋನಾಲ್ ಮೊಂತೆರೊರಿಂದ 'ಲೋ ನವೀನ' ಎರಡನೇ ಹಾಡಿನ ಅನಾವರಣ

ಗಾಯಕನಾಗಿ ಜನಪ್ರಿಯರಾಗಿರುವ ನವೀನ್ ಸಜ್ಜು ನಾಯಕನಾಗಿ ನಟಿಸಿರುವ ಮೊದಲ ಚಿತ್ರ 'ಲೋ ನವೀನ'. ಈಗಾಗಲೇ ಈ



ಚಿತ್ರದ ಜನಪದ ಶೈಲಿಯ 'ಕೋಣಾಣೆ' ಹಾಡು ಬಿಡುಗಡೆಯಾಗಿ ಎಲ್ಲರ ಮನ ಗೆದ್ದಿದೆ. ಇತ್ತೀಚೆಗೆ 'ಲೋ ನವೀನ' ಚಿತ್ರದ "ಕೈ ತೊಳ್ಕೊಂಡ್ ಮುಟ್ಟಂಗವ್ಳೆ ನನ್ ಹುಡುಗಿ" ಎಂಬ ಹಾಡು ಆನಂದ್ ಆಡಿಯೋ ಮೂಲಕ ಬಿಡುಗಡೆಯಾಗಿದೆ. ನಟಿ ಸೋನಾಲ್ ಮೊಂತೆರೊ ಈ ಹಾಡನ್ನು ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದರು. ಮಾಜಿ ಸಂಸದ ಪುಟ್ಟರಾಜು, ರಾಮಮೂರ್ತಿ, ಮಾದೇಶ್ ಮುಂತಾದ ಗಣ್ಯರು ಹಾಡು ಬಿಡುಗಡೆ ಸಮಾರಂಭದಲ್ಲಿ ಉಪಸ್ಥಿತರಿದ್ದು ಹಾರೈಸಿದರು. ನಾನು ಮೂಲತಃ ಮಳವಳ್ಳಿಯವನು. ಹಳ್ಳಿ ಪರಿಸರದಲ್ಲೇ ಬೆಳೆದವನು. ಗಾಯಕನಾಗಿದ್ದ ನಾನು ಈ ಚಿತ್ರದ ಮೂಲಕ ನಾಯಕನಾಗಿದ್ದೇನೆ. ಇದಕ್ಕೆ ಕಾರಣರಾದವರು ನಮ್ಮ ಚಿತ್ರದ ನಿರ್ಮಾಪಕರಾದ ಬೆನ್ ಚಿಕ್ಕಸ್ವಾಮಿ ಹಾಗೂ ಕೀರ್ತಿ ಸ್ವಾಮಿ.ಕಾರ್ಯಕ್ರಮದ ನಿಮಿತ್ತ ಅಮೇರಿಕಾಗೆ ಹೋದಾಗ ಅವರನ್ನು ಮಾದೇಶ್ ಅವರು ಭೇಟಿ ಮಾಡಿಸಿದರು ಎಂದರು.

# ತೆರೆಗೆ ಕ್ರೈಮ್ ಥ್ರಿಲ್ಲರ್ ಫಾಗ್ರಾ

ಜೋಗಿ, ಪ್ರೀತಿ ಏಕೆ ಭೂಮಿ ಮೇಲಿದೆ ಇಂಥ ಯಶಸ್ವೀ ಚಿತ್ರಗಳನ್ನು ನಿರ್ಮಿಸಿದ ಅಶ್ವಿನಿ ರಾಮ್ ಪ್ರಸಾದ್ ಅವರ ನಿರ್ಮಾಣದ ಬಹು ನಿರೀಕ್ಷಿತ ಚಿತ್ರ ಫಾಗ್ರಾ ಇದೇ ಶುಕ್ರವಾರ ರಾಜ್ಯಾದ್ಯಂತ ತೆರೆಕಾಣುತ್ತಿದೆ. ಎಂ. ಶಶಿಧರ್ ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ಆಕ್ಷನ್‌ಕಟ್ ಹೇಳಿದ್ದಾರೆ. ಜತೆಗೆ ಸಂಕಲನ ಮಾಡಿದ್ದಾರೆ. ಫಾಗ್ರಾ ಒಂದು ಊರಿನ ಹೆಸರು, ದ ಲ್ಯಾಂಡ್ ಆಫ್ ಶಾಡೋ ಎಂಬ ಅಡಿಬರಹ ಇರುವ ಈ ಚಿತ್ರದಲ್ಲಿ ಅರುಣ್ ರಾಮ್‌ಪ್ರಸಾದ್ ಮೊದಲ ಬಾರಿಗೆ ನಾಯಕನಾಗಿ ಪರಿಚಯವಾಗುತ್ತಿದ್ದಾರೆ. ಇದೊಂದು ಅಡ್ವೆಂಚರಸ್ ಡ್ರಾಮಾ, ಹಾರರ್ ಕ್ರೈಮ್, ಥ್ರಿಲ್ಲರ್ ಚಿತ್ರವಾಗಿದ್ದು, ಅರುಣ್ ಒಬ್ಬ ರೈಟರ್, ಸಂಶೋಧಕನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಇವರ ಪಾತ್ರಕ್ಕೆ ರೈಟರ್, ಅಂಡರ್ ವರ್ಲ್ಡ್ ಹೀಗೆ ಹಲವಾರು ಶೇಡ್ಸ್ ಇದೆ, ಜತೆಗೆ ನಾಯಕಿ ಪಾತ್ರದಲ್ಲಿ ರೆಹಾನ ಕಾಣಿಸಿಕೊಂಡಿದ್ದಾರೆ. ಮಂಗಳೂರು, ಚಿಕ್ಕಮಗಳೂರು, ದಾಂಡೇಲಿ, ಆಗುಂಬೆ ಹಾಗೂ ಬೆಂಗಳೂರಲ್ಲಿ ಈ ಚಿತ್ರದ ಚಿತ್ರೀಕರಣ ನಡೆಸಲಾಗಿದೆ. ವಿಭಿನ್ನ ಕಂಟೆಂಟ್, ಟ್ರೈಲರ್ ಮೂಲಕವೇ ಸಾಕಷ್ಟು ನಿರೀಕ್ಷೆಗಳನ್ನು ಹುಟ್ಟುಹಾಕಿರುವ ಈ ಚಿತ್ರದಲ್ಲಿ ವಿಶೇಷವಾಗಿ ದರ್ಶನ್ ಅಭಿಮಾನಿಗಳಿಗಾಗಿ ಗಜ ಚಿತ್ರದ ಬಂಗಾರಿ ಯಾರೇ ನೀ ಬುಲ್ ಬುಲ್ ಹಾಡನ್ನು ರೀಮಿಕ್ಸ್ ಮಾಡಿ ಬಳಸಿಕೊಳ್ಳಲಾಗಿದೆ.



# ನಿರ್ದೇಶನಕ್ಕಿಳಿದ ಲಿಜೆಂಡರಿ ಡೈರೆಕ್ಟರ್ ಸಿಂಗೀತಂ ಶ್ರೀನಿವಾಸ್ ರಾವ್

ಸಿಂಗೀತಂ ಶ್ರೀನಿವಾಸ್ ರಾವ್, ಭಾರತೀಯ ಚಿತ್ರರಂಗ ಕಂಡ ಅದ್ಭುತ ನಿರ್ದೇಶಕ. ಸೂಪರ್ ಹಿಟ್ ಚಿತ್ರ ಪುಷ್ಪಕ ವಿಮಾನದ ಸಾರಥಿ ಇವ್ರೇ. ಅಷ್ಟೇ ಅಲ್ಲ ತೆಲುಗು, ಕನ್ನಡ, ತಮಿಳು, ಹಿಂದಿ ಭಾಷೆಯಲ್ಲಿ ಸಿನಿಮಾ ಮಾಡಿ ಸೈ ಎನಿಸಿಕೊಂಡಿರುವ ಸಿಂಗೀತ ಶ್ರೀನಿವಾಸ್ ರಾವ್, ಒಂದಷ್ಟು ಗ್ಯಾಪ್ ಬಳಿಕ ಮತ್ತೆ ಡೈರೆಕ್ಟರ್ ಕ್ಯಾಪ್ ತೊಟ್ಟಿದ್ದಾರೆ. ಶ್ರೀನಿವಾಸ್ ಅವರು 94ನೇ ವಯಸ್ಸಿನಲ್ಲಿ ನಿರ್ದೇಶನದತ್ತ ಮುಖ ಮಾಡಿದ್ದು, ಅವರಿಗೆ ದಕ್ಷಿಣ ಭಾರತದ ಪ್ರಮುಖ ನಿರ್ಮಾಣ ಸಂಸ್ಥೆ ವೈಜಯಂತಿ ಮೂವೀಸ್ ಸಾಥ್ ಕೊಟ್ಟಿದೆ. ಈ ಬ್ಯಾನರ್ ನಡಿ ಕಲ್ಕಿ ಡೈರೆಕ್ಟರ್ ನಾಗ್ ಅಶ್ವಿನ್ ಸಿನಿಮಾಗೆ ಹಣ ಹಾಕುತ್ತಿದ್ದಾರೆ. ಸಿಂಗೀತಂ ಶ್ರೀನಿವಾಸ್ ರಾವ್ ಅವರ 61ನೇ ಸಿನಿಮಾ ಇದಾಗಿದೆ. ಈಗಾಗಲೇ ಚಿತ್ರೀಕರಣ ಶುರುವಾಗಿದ್ದು, ಈ ಕುರಿತು ವೈಜಯಂತಿ ಮೂವೀಸ್ ವಿಡಿಯೋ ಹಂಚಿಕೊಂಡಿದೆ. ಈ ಚಿತ್ರಕ್ಕೆ ದೇವಿ ಶ್ರೀ ಪ್ರಸಾದ್ ಅವರು ಸಂಗೀತ ನೀಡುತ್ತಿದ್ದಾರೆ.



# ವಿಂಟೇಜ್ ಲುಕ್‌ನಲ್ಲಿ ಕಯಾದು ಲೋಹರ್

ಮಲಯಾಳಂ ನಟ ಟೋವಿನೋ ಥಾಮಸ್ ನಟಿಸುತ್ತಿರುವ ಬಹು ನಿರೀಕ್ಷಿತ ಪಳ್ಳಿಚಟ್ಟಂಬಿ ಸಿನಿಮಾದ ಹೊಸ ಪೋಸ್ಟರ್ ಬಿಡುಗಡೆಯಾಗಿದೆ. ನಾಯಕಿ ಕಯಾದು ಲೋಹರ್ ಫಸ್ಟ್ ಲುಕ್ ಅನಾವರಣ ಮಾಡಲಾಗಿದ್ದು, ವಿಂಟೇಜ್ ಲುಕ್‌ನಲ್ಲಿ ಅವರು ಕಾಣಿಸಿಕೊಂಡಿದ್ದಾರೆ. ಚಿತ್ರದಲ್ಲಿ ವಿಜಯರಾಘವನ್, ಸುಧೀರ್ ಕರಮನ, ಬಾಬುರಾಜ್, ವಿನೋದ್ ಕೆದಮಂಗಲಂ, ಪ್ರಶಾಂತ್ ಅಲೆಕ್ಸಾಂಡರ್ ತಾರಾಗಣದಲ್ಲಿದ್ದಾರೆ. 1950–60ರ ದಶಕದ ಸುತ್ತ ಕಥೆಯನ್ನು ಎಣೆಯಲಾಗಿದೆ. ಚಿತ್ರದ ಛಾಯಾಗ್ರಹಣವನ್ನು ಟಿಜೊ ಟಾಮಿ ನಿರ್ವಹಿಸಿದರೆ, ಜೇಕ್ಸ್ ಬಿಜಾಯ್ ಸಂಗೀತ ಸಂಯೋಜಿಸಿ, ಸಂಕಲನವನ್ನು ಶ್ರೀಜಿತ್ ಸಾರಂಗ್ ಮತ್ತು ನಿರ್ಮಾಣ ವಿನ್ಯಾಸವನ್ನು ದಿಲೀಪ್‌ನಾಥ್ ನಿರ್ವಹಿಸಿದ್ದಾರೆ. ಚಿತ್ರಕಥೆಯನ್ನು ಎಸ್ ಸುರೇಶ್ ಬಾಬು ಬರೆದಿ ದ್ದಾರೆ. ಪಳ್ಳಿಚಟ್ಟಂಬಿ ಸಿನಿಮಾ ವರ್ಲ್ಡ್ ವೈಡ್ ಫಿಲ್ಮ್ಸ್ ಬ್ಯಾನರ್ ನಡಿಯಲ್ಲಿ ನೌಫಲ್ ಮತ್ತು ಬ್ರಿಜೀಶ್ ನಿರ್ಮಿಸಿದ್ದಾರೆ. ಜೊತೆಗೆ ಸಿಕ್ಯೂಬ್ ಬ್ರದರ್ಸ್ ಎಂಟರ್‌ಟೈನ್‌ಮೆಂಟ್ಸ್ ಬ್ಯಾನರ್ ನಡಿಯಲ್ಲಿ ಚಾಣುಕ್ಯ ಚೈತನ್ಯ ಚರಣ್ ನಿರ್ಮಿಸಿದ್ದಾರೆ.



# ಅಮೆಜಾನ್ ಪ್ರೈಮ್‌ನಲ್ಲಿ ಸಿಂಪಲ್ ಸುನಿ 'ಗತವೈಭವ'

ಸಿಂಪಲ್ ಸುನಿ ನಿರ್ದೇಶನದಲ್ಲಿ ಮೂಡಿಬಂದಿದ್ದ, ಹೊಸ ಹೀರೋ ದುಷ್ಯಂತ್ ನಾಯಕನಾಗಿ ಹಾಗೂ ಆಶಿಕಾ ರಂಗನಾಥ್ ನಾಯಕಿಯಾಗಿ ನಟಿಸಿರುವ ಗತವೈಭವ ಸಿನಿಮಾವೀಗ ಒಟಿಟಿಗೆ ಎಂಟ್ರಿ ಕೊಟ್ಟಿದೆ. ಇಂದಿನಿಂದ ಅಮೆಜಾನ್ ಪ್ರೈಮ್ ನಲ್ಲಿ ಗತವೈಭವ ಸ್ಟ್ರೀಮಿಂಗ್ ಆಗ್ತಿದೆ. ಕಳೆದ ವರ್ಷ ನವೆಂಬರ್ 14ರಂದು ತೆರೆಕಂಡ ಈ ಚಿತ್ರದ ಮೂಲಕ ಸುನಿ ನಾಲ್ಕು ವಿಭಿನ್ನ ಕಥೆಗಳನ್ನು ಪ್ರೇಕ್ಷಕರಿಗೆ ಉಣಬಡಿಸಿದ್ದರು. ದುಷ್ಯಂತ್ ಚೊಚ್ಚಲ ಸಿನಿಮಾದಲ್ಲಿ ಪಳಗಿದ ನಾಯಕನಂತೆ ಅಭಿನಯಿಸಿ ಸಿನಿಪ್ರಿಯರಿಂದ ಚಪ್ಪಾಳೆ ಗಿಟ್ಟಿಸಿಕೊಂಡಿದ್ದರು. ಸಿಂಪಲ್ ಸುನಿ ಗತವೈಭವ ಸಿನಿಮಾಗೆ ಕಥೆ–ಚಿತ್ರಕಥೆ ಜೊತೆಗೆ ಸಂಭಾಷಣೆ ಕೂಡ ಬರೆದಿದ್ದಾರೆ. ಸುನಿ ಸಿನಿಮಾಸ್ ಸಂಸ್ಥೆಯಲ್ಲಿ ದೀಪಿಕ್ ಹಾಗೂ ಸುನಿ ಇಬ್ಬರೂ ಸೇರಿ ನಿರ್ಮಾಣ ಮಾಡಿದ್ದಾರೆ. ವಿಲಿಯಂ ಡೇವಿಡ್ ಕ್ಯಾಮೆರಾ ವರ್ಕ್, ಜೂಡಾ ಸ್ಯಾಂಡಿ ಸಂಗೀತ ನೀಡಿದ್ದಾರೆ.






## ಚಿತ್ರೋತ್ಸವದಲ್ಲಿ 'ಏಳುಮಲೆ' ಚಿತ್ರ ಪ್ರದರ್ಶನ



ತರುಣ್ ಕಿಶೋರ್ ಸುಧೀರ್ ಹಾಗೂ ಅಟ್ಲಾಂಟಾ ನಾಗೇಂದ್ರ ನಿರ್ಮಾಣದ, ಪುನೀತ್ ರಂಗಸ್ವಾಮಿ ನಿರ್ದೇಶನದ ಹಾಗೂ ರಾಣಾ, ಪ್ರಿಯಾಂಕ ಆಚಾರ್ ನಾಯಕ, ನಾಯಕಿಯಾಗಿ ನಟಿಸಿರುವ ಏಳುಮಲೆ ಚಿತ್ರ ಈ ಬಾರಿಯ 17ನೇ ಬೆಂಗಳೂರು ಅಂತಾರಾಷ್ಟ್ರೀಯ ಚಿತ್ರೋತ್ಸವದಲ್ಲಿ ಪ್ರದರ್ಶನವಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕ ಪುನೀತ್ ರಂಗ ಸ್ವಾಮಿ, ವಿಭಿನ್ನ ಕಥಾಹಂದರ ಹೊಂದಿರುವ ನಮ್ಮ ಚಿತ್ರಕ್ಕೆ ನೋಡುಗರಿಂದ ಹಾಗೂ ವಿಮರ್ಶಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿತ್ತು. ಈ ಬಾರಿಯ ಬೆಂಗಳೂರು ಚಿತ್ರೋತ್ಸವಕ್ಕೆ ನಮ್ಮ ಚಿತ್ರ ಆಯ್ಕೆಯಾಗಿರುವುದು ಬಹಳ ಖುಷಿಯಾಗಿದೆ. ಚಿತ್ರಮಂದಿರದಲ್ಲಿ ಸಿನಿಮಾ ನೋಡುವ ವೀಕ್ಷಕರೇ ಬೇರೆ ಹಾಗೂ ಚಿತ್ರೋತ್ಸವದಲ್ಲಿ ಸಿನಿಮಾ ನೋಡುವ ವೀಕ್ಷಕರೆ ಬೇರೆ ಆಗಿರುತ್ತಾರೆ ಎಂದರು.

## ಗೀತರಚನೆಯನ್ನು ಕಲಿಸುವುದಕ್ಕೆ ಸಾಧ್ಯವಿಲ್ಲ..




ಗೀತರಚನೆ ಎನ್ನುವುದು ಕಲಿಯೋದು, ಕಲಿಸೋದಲ್ಲ. ಕನ್ನಡ ಕಾವ್ಯ, ಸಾಹಿತ್ಯ ಓದಬೇಕು. ಜನಜೀವನ ನೋಡಬೇಕು. ಬರವಣಿಗೆ ಎನ್ನುವುದು ನಮ್ಮ ಸುಪ್ತಮನಸ್ಸಿನಿಂದ ಬರುವಂತದ್ದು. ಅದಕ್ಕೆ ಯಾವುದೇ ತರಬೇತಿ, ಕಾರ್ಯಾಗಾರ ಇರುವುದಿಲ್ಲ ಎಂದು ಖ್ಯಾತ ಸಾಹಿತಿ ಮತ್ತು ಚಿತ್ರಸಾಹಿತಿ ಜಯಂತ್ ಕಾಯ್ಕಿಣಿ ಅಭಿಪ್ರಾಯಪಟ್ಟಿದ್ದಾರೆ. 17ನೇ ಬೆಂಗಳೂರು ಅಂತರರಾಷ್ಟ್ರೀಯ ಚಲನ ಚಿತ್ರೋತ್ಸವದಲ್ಲಿ ನಡೆದ ಸಂವಾದದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಗೀತರಚನೆಯನ್ನು ಕಲಿಸುವುದಕ್ಕಾಗುವುದಿಲ್ಲ. ಕನಸ್ಸಿನಲ್ಲಿ ಒಮ್ಮೊಮ್ಮೆ ಅಮೂರ್ತವಾಗಿ ಏನೇನೋ ಕಾಣುತ್ತದಲ್ಲ, ಗೀತರಚನೆಯೂ ಹಾಗೆಯೇ. ನಿರ್ದೇಶನ, ನಟನೆಯ ತರಹ ಗೀತರಚನೆಗೆ ತರಬೇತಿಯಿಂದ ಸಾಧ್ಯವಿಲ್ಲ. ಸ್ವತಂತ್ರವಾಗಿ ಬರೆಯುವುದಕ್ಕೆ ಕಲಿಯಬೇಕು ಎಂದು ಹೇಳಿದರು.

## 'ನವರಸ ನಾಯಕಿ'ಯ ಮಿಂಚು..

"ವಯಸ್ಸು ಕೇವಲ ಮನುಷ್ಯನ ಮನಸ್ಸಿನ ಮಿತಿಯಷ್ಟೇ ಹೊರತು ಸಾಧನೆಯ ಹಾದಿಗಲ್ಲ" ಎಂಬುದನ್ನು ಖ್ಯಾತ ನಟ ಜಗ್ಗೇಶ್ ಅವರ ಧರ್ಮಪತ್ನಿ, ಹೆಸರಾಂತ ಆಹಾರ ತಜ್ಞೆ ಡಾ. ಪರಿಮಳ ಜಗ್ಗೇಶ್ ಅಕ್ಷರಶಃ ಸಾಬೀತು ಪಡಿಸಿದ್ದಾರೆ. ಇತ್ತೀಚೆಗೆ ನಡೆದ ರಾಜ್ಯ ಮಟ್ಟದ ಶೂಟಿಂಗ್ ಚಾಂಪಿಯನ್ ಶಿಪ್‌ನಲ್ಲಿ ಬೆಳ್ಳಿ ಪದಕ ಗೆಲ್ಲುವ ಮೂಲಕ ಅವರು ಕನ್ನಡಿಗರ ಹೆಮ್ಮೆಯ ಸಾಧಕಿಯಾಗಿ ಹೊರಹೊಮ್ಮಿದ್ದಾರೆ. ಅದ್ಭುತ ಕ್ರೀಡಾ ಸಾಧನೆ: ಕರ್ನಾಟಕ ರಾಜ್ಯ ರೈಫಲ್ ಅಸೋಸಿಯೇಷನ್ ವತಿಯಿಂದ ಬೆಂಗಳೂರಿನ 'ಸ್ಪೋರ್ಟ್ಸ್ ಅಥಾರಿಟಿ ಆಫ್ ಇಂಡಿಯಾ' ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ "3ನೇ ನಾಗರಾಜ ರಾವ್ ಜಗದಾಳೆ ಶೂಟಿಂಗ್ ಸ್ಪರ್ಧೆ ಮತ್ತು ಚಾಂಪಿಯನ್‌ಶಿಪ್ – 2026" ರಲ್ಲಿ ಪರಿಮಳ ಅವರು ಪಾಲ್ಗೊಂಡಿದ್ದರು. ಅವರಿಗೆ ಬೆಳ್ಳಿ ಪದಕ ಲಭಿಸಿದೆ.



## ಖಾಲಿಪುಟದಲ್ಲಿ ನೈಜಕತೆಯ ಮೆರುಗು..

ಸಪ್ತಗಿರಿ ಕ್ರಿಯೇಷನ್ಸ್ ಲಾಂಛನದಲ್ಲಿ ಕೃಷ್ಣೇಗೌಡರು ನಿರ್ಮಿಸಿ ಅಭಿನಯಿಸಿರುವ, ನಾಗೇಶ್ ಎನ್ ನಿರ್ದೇಶಿಸಿ ಜೊತೆಗೆ ಸಂಕಲನ ಮಾಡಿರುವ, ಪಿವಿಆರ್ ಸ್ವಾಮಿ ಛಾಯಾಗ್ರಹಣದ ಚಿತ್ರ ಖಾಲಿಪುಟ 17ನೇ ಬೆಂಗಳೂರು ಅಂತರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಕನ್ನಡ ಸ್ಪರ್ಧಾ ವಿಭಾಗಕ್ಕೆ ಆಯ್ಕೆಯಾಗಿದ್ದು ಕಳೆದ ಭಾನುವಾರ ಫೆಬ್ರವರಿ 01ನೇ ತಾರೀಖು ಪ್ರದರ್ಶನವಾಗಿತ್ತು. ಈ ಚಿತ್ರವನ್ನು ನೋಡಿದಾಗ ನಿರ್ದೇಶಕರು ತನ್ನ ಹಿಡಿತವನ್ನು ಬಿಟ್ಟು ಕೊಡದೆ ಚಿತ್ರದ ಕೊನೆಯವರೆಗೆ ಕುತೂಹಲ ಮೂಡಿಸಿರುವ ಜೊತೆಗೆ ಯಾವುದೇ ಆಡಂಬರ ಇಲ್ಲದೆ ಅಚ್ಚುಕಟ್ಟಾಗಿ ತೆರೆಗೆ ತಂದಿದ್ದಾರೆ, ಮುಖ್ಯ ಪಾತ್ರದಲ್ಲಿ ಅಭಿನಯಿಸಿರುವ ಕೃಷ್ಣೇಗೌಡರು ಮತ್ತು ಅರ್ಚನಾ ಅನಂತ್ ಚೆನ್ನಾಗಿ ಅಭಿನಯಿಸಿದ್ದು ಕೂಡ ಚಿತ್ರಕ್ಕೆ ಮಗದಷ್ಟು ಮೆರುಗು ನೀಡಿದೆ. ಒಟ್ಟಾರೆಯಾಗಿ ಹೇಳಬೇಕೆಂದರೆ ಚಲನಚಿತ್ರೋತ್ಸವದಲ್ಲಿ ನೈಜಕತೆಯ ಮೆರುಗು ಇರುವ 'ಖಾಲಿಪುಟ' ಚಿತ್ರವನ್ನು ವೀಕ್ಷಿಸಿದಕ್ಕೆ ನಮಗೂ ಒಂದೊಳ್ಳೆ ಅನುಭವ ಸಿಕ್ತು.



## ಕ್ಲಾಸಿಕ್ ಸಿನಿಮಾ ಸಂಗ್ರಹಣೆ ಮುಖ್ಯ..

ಕನ್ನಡದ ಹಳೆಯ ಸಿನಿಮಾಗಳ ಸಂರಕ್ಷಣೆ ಮತ್ತು ಪುನಶ್ಚೇತನದ ಕಡೆಗೆ ಕರ್ನಾಟಕ ಚಲನಚಿತ್ರ ಅಕಾಡೆಮಿ ಗಮನಹರಿಸಬೇಕು' ಎಂದು ಸಿನಿವಮಾ ಸಂರಕ್ಷಣೆ ಮತ್ತು ಪುನಶ್ಚೇತನಾ ಕಾರ್ಯದಲ್ಲಿ ತೊಡಗಿಕೊಂಡಿರುವ ಅಪರ್ಣಾ ಸುಬ್ರಮಣಿಯನ್ ಹೇಳಿದರು. ಬೆಂಗಳೂರು ಚಿತ್ರೋತ್ಸವದಲ್ಲಿ ನಡೆದ 'ಸಿನಿಮಾಗಳ ಸಂಗ್ರಹಣೆ, ಸಂರಕ್ಷಣೆ ಮತ್ತು ಪುನಶ್ಚೇತನ'ಗೊಳಿಸುವ ಮಹತ್ವದ ಕುರಿತು ಮಾತನಾಡಿದರು. 'ಚಿತ್ರೋತ್ಸವದಲ್ಲಿ ಪ್ರದರ್ಶನವಾದ ಹಳೆಯ ಕ್ಲಾಸಿಕ್ ಸಿನಿಮಾಗಳನ್ನು ವೀಕ್ಷಿಸಿದ ಬಳಿಕ ಅದರ ಗುಣಮಟ್ಟ ಸಮರ್ಪಕವಾಗಿಲ್ಲದೇ ಇರುವುದು ಅರಿವಿಗೆ ಬಂತು. ಈ ನಿಟ್ಟಿನಲ್ಲಿ ಹಳೆಯ ಸಿನಿಮಾಗಳನ್ನು ಸಂಗ್ರಹಿಸಿ ಉಳಿಸುವುದು ಅಗತ್ಯವಾಗಿದೆ. ಸಾಮಾನ್ಯವಾಗಿ ನಿರ್ಮಾಪಕರಿಗೆ ಲಾಭಗಳಿಸುವ ಕಡೆಗೆ ಗಮನ ಇರುತ್ತದೆಯೇ ಹೊರತು ಸಂರಕ್ಷಣೆ ಕಡೆಗೆ ಎಚ್ಚರ ಇರುವುದಿಲ್ಲ. ಹಾಗಾಗಿ, ಸಂರಕ್ಷಣೆ ದೊಡ್ಡ ಮಟ್ಟದಲ್ಲಿ ನಡೆಯಬೇಕು' ಎಂದು ಹೇಳಿದರು.










KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021